ಸಂಪುಟ : 11 ಸಂಚಿಕೆ: 28 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 28 Pages : 4+2 Price : 3.00 Thursday February 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶಾಸಕ ಡಾ. ಚಂದ್ರು ಲಮಾಣಿ ಪರ ಲಕ್ಷ್ಮೇಶ್ವರದಲ್ಲಿ ಅಭಿಮಾನಿ ಬಳಗದಿಂದ ಬೃಹತ್ ಪ್ರತಿಭಟನೆ

# ಇಂತಹ ಗೊಡ್ಡು ಬೆದರಿಕೆಗಳಿಗೆ ಹೆದರುವುದಿಲ್ಲ




ದಲಿತ ಮುಖಂಡನಾಗಿ ಈ ಭಾಗದಲ್ಲಿ ಒಳ್ಳೆಯ ಹೆಸರು ಮಾಡುತ್ತಿದ್ದ ಯುವಕ ಬೆಳೆಯುತ್ತಿರುವದನ್ನು ಕಂಡು ಇಂತಹ ಹೇಯ ಕೃತ್ಯಕ್ಕೆ ಮುಂದಾಗಿದ್ದಾರೆ. ಬಂಜಾರ ಸಮಾಜವನ್ನು ತುಳಿಯುವ ಕಾರ್ಯವನ್ನು ಕಾಂಗ್ರೆಸ್ ಮಾಡುತ್ತಿದೆ ಎಂದು ಆರೋಪಿಸಿದರು. ಷಡ್ಯಂತ್ರದ ಮೂಲಕ ದಲಿತ ಶಾಸಕರನ್ನು ಬಂಧಿಸಿ ಮಟ್ಟ ಹಾಕುವ ಹುನ್ನಾರವನ್ನು ಕಾರ್ಯಕರ್ತರು ಸಹಿಸುವದಿಲ್ಲ, ಇಂತಹ ಗೊಡ್ಡು ಬೇದರಿಕೆಗಳಿಗೆ ಹೆದರುವುದಿಲ್ಲ ಎಂದು ಪ್ರತಿಭಟನಾಕಾರರು ಅಕ್ರೋಶ ವ್ಯಕ್ತಪಡಿಸಿದರು.



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿ ಮತಕ್ಷೇತ್ರದ ಬಿಜೆಪಿ ಶಾಸಕ ಡಾ. ಚಂದ್ರು ಲಮಾಣಿ ಅವರನ್ನು ಕಾಂಗ್ರೆಸ್ ಪಕ್ಷದವರು ಲಂಚ ನೀಡಿದ ಷಡ್ಯಂತ್ರ-ಕುತಂತ್ರದಿಂದ ಲೋಕಾ ಬಲೆಗೆ ಸಿಕ್ಕಿಸಿ ಮೋಸ ಮಾಡಿದ್ದಾರೆ ಎಂದು ಬುಧವಾರ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗ ಹಾಗೂ ಬಂಜಾರ ಸಮಾಜದಿಂದ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ತೀವ್ರ ಅಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಶ್ರೀಸೋಮೇಶ್ವರ ತೇರಿನ ಮನೆ ಆವರಣದಲ್ಲಿ ಲಕ್ಷ್ಮೇಶ್ವರ ಸೇರಿ ಶಿರಹಟ್ಟಿ, ಮುಂಡರಗಿ ಭಾಗದಿಂದ ಜಮಾಸಿದ ಅಭಿಮಾನಿಗಳು, ಬಂಜಾರ ಸಮಾಜದವರು ಶಾಸಕ ಚಂದ್ರು ಲಮಾಣಿ ಅವರ ಬಂಧನಕ್ಕೆ ಹೆಣೆದ ಕುತಂತ್ರದ ವಿರುದ್ಧ ಸಿಡಿದೆದ್ದರು.

ಪ್ರತಿಭಟನಾ ರ್ಯಾಲಿಯುದ್ದಕ್ಕೂ ಶಾಸಕರೇ ನಾವು ನಿಮ್ಮೊಂದಿಗಿದ್ದೇವೆ ಯಾವುದೇ ಕಾರಣಕ್ಕೂ ಅಳುಕಬೇಡಿ, ಕುತಂತ್ರದಿಂದ ನಿಮ್ಮ ಏಳಿಗೆ ಸಹಿಸದವರು ಇಂತಹ ಹೇಯ ಕೃತ್ಯಕ್ಕೆ ಇಳಿಯುವ ಕಾರ್ಯ ಮಾಡಿದ್ದಾರೆ ಎಂದು ಘೋಷಣೆ ಕೂಗಿದರು. ನಮ್ಮ ಶಾಸಕ ನಮ್ಮ ಹೆಮ್ಮೆ, ಅನ್ನದಾತ ಶಾಸಕ, ಜನಪರ ಕಾಳಜಿ ಶಾಸಕ, ಪ್ರಾಮಾಣಿಕ ಸೇವಕ ಶಾಸಕ, ನಿಮ್ಮೊಂದಿಗೆ ನಾವಿದ್ದೇವೆ ಎಂಬಿತ್ಯಾದಿ ನೂರಾರು ಬಿತ್ತಿ ಪತ್ರಗಳನ್ನು ಹಿಡಿದ ಸಾವಿರಾರು ಜನ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನಾ ಮೆರವಣಿಗೆಯು ಸೋಮೇಶ್ವರ ತೇರಿನ ಮನೆಯಿಂದ ಸಾಗಿ ಕಾಶೆಟ್ಟಿಯವರ ಓಣಿ, ಪೇಟೆ ರಸ್ತೆ, ಪುರಸಭೆ ಶಿಗ್ಗಿ ನಾಕಾ ಮೂಲಕ ಹಾಯ್ದು ಹೊಸ ಬಸ್‌ನಿಲ್ದಾಣದಲ್ಲಿ ಸುಮಾರು 1 ಗಂಟೆಗೂ ಅಧಿಕ ಕಾಲ ರಸ್ತೆಯಲ್ಲಿ ಕುಳಿತು ಅಕ್ರೋಶ ವ್ಯಕ್ತಪಡಿಸಿದರು. ನಂತರ ಸಭೆಯಲ್ಲಿ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದ ಹಿರಿಯ ಸದಸ್ಯ ಸುನೀಲ ಮಹಾಂತಶೆಟ್ಟರ, ಶಂಕರ ಮರಾಠೆ, ಅಶೋಕ ಶಿರಹಟ್ಟಿ, ತಿಮ್ಮರಡ್ಡಿ ಮರಡ್ಡಿ, ಕುಮಾರಸ್ವಾಮಿ ಹಿರೇಮಠ, ನವೀನ ಹಿರೇಮಠ, ನಾಗರಾಜ ಲಕ್ಕುಂಡಿ, ಲಿಂಗರಾಜ ಪಾಟೀಲ, ಶಿವಣ್ಣ ಲಮಾಣಿ ಅವರುಗಳು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಅವರ ಪತ್ನಿ ಮುಡಾ ಹಗರಣದಲ್ಲಿ 14 ಸೈಟ್ ಪಡೆದು ಪ್ರಕರಣ ದಾಖಲಾಗುತ್ತಿದ್ದಂತೆಯೇ 14 ಸೈಟ್ ವಾಪಸು ಕೊಟ್ಟರಲ್ಲ ಆಗ ಅವರ ರಾಜೀನಾಮೆ ಕೇಳಿದಿರಾ? ಅಬಕಾರಿ ಹಗರಣದಲ್ಲಿ ಆರ್.ಬಿ.ತಿಮ್ಮಾಪೂರವರು ರಾಜೀನಾಮೆ ನೀಡಿದ್ದಾರಾ ಎಂದು ಪ್ರಶ್ನಿಸಿದರು. ಪ್ರತಿಭಟನಾ ಮೆರವಣಿಗೆಯಲ್ಲಿ ಡಾ. ಭೀಮಸಿಂಗ ರಾಠೋಡ, ಚವ್ಹಾಣ, ಆನಂದಗೌಡ ಪಾಟೀಲ, ಎಂ.ಎಸ್. ದೊಡ್ಡಗೌಡರ, ಶಿವಪ್ರಕಾಶ ಮಹಾಜನಶೆಟ್ಟರ, ಡಿ.ವಾಯ್. ಹುನಗುಂದ, ಟೋಪಣ್ಣ ಲಮಾಣಿ, ಥಾವರಪ್ಪ ಲಮಾಣಿ, ಕರಬಸಪ್ಪ ಹಂಚಿನಾಳ, ಶಿವಯೋಗಿ ಅಂಕಲಕೋಟಿ, ಫಕ್ಕಿರೇಶ ರಟ್ಟಿಹಳ್ಳಿ, ಪೂರ್ಣಾಜಿ ಖರಾಟೆ, ವಿಜಯ ಮೆಕ್ಕಿ, ರಮೇಶ ಧನದಮನಿ, ದೇವಪ್ಪ ಮತ್ತೂರ, ಬಸವರಾಜ ಗಾಣಗೇರ, ಈರಣ್ಣ ಪೂಜಾರ, ಜಾನು ಲಮಾಣಿ, ಸಂತೋಷ ಲಮಾಣಿ, ಗಿರೀಶ ಚೌರಡ್ಡಿ, ಮಲ್ಲೇಶಪ್ಪ ಲಮಾಣಿ, ಅಶೋಕ ಬಟಕುರ್ಕಿ, ನಿಂಗಪ್ಪ ಪ್ಯಾಟಿ, ಭೀಮಣ್ಣ ಯಂಗಾಡಿ, ಶಿವಾನಂದ ಮೆಕ್ಕಿ, ಕಲ್ಲಪ್ಪ ಹಡಪದ, ನಂದಾ ಪಲ್ಲೇದ, ಜ್ಯೋತಿ ಹಾನಗಲ್, ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ್, ವಾಣಿ ಹತ್ತಿ, ಮಂಜುಳಾ ಗುಂಜಳ, ಮೋಹನ ಗುತ್ತೆಮ್ಮನವರ, ಶಿವಣಗೌಡರ ಕಂಟಿಗೌಡರ, ಶಂಕರ ಬಾವಿ, ಮಹೇಶ ಬಡ್ನಿ, ಫಕ್ಕೀರೇಶ ರಟ್ಟೆಹಳ್ಳಿ, ತಿಪ್ಪಣ್ಣ ಕೊಂಚಿಗೇರಿ, ಬಸವರಾಜ ಇಟಗಿ, ರಾಜು ಅಂದಲಗಿ ಸೇರಿದಂತೆ ಸಾವಿರಾರು ಅಭಿಮಾನಿಗಳು ಪಾಲ್ಗೊಂಡಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಎಸ್‌ಡಿಪಿಐ ವತಿಯಿಂದ ಆಗ್ರಹ

# ಕಲ್ಯಾಣ ರಾಜ್ಯಕ್ಕಾಗಿ ಜನತಾ ಬಜೆಟ್ ಮಂಡಿಸಿ




ನರಗುಂದದಲ್ಲಿ ನಿರ್ಮಿಸುತ್ತಿರುವ ಆಚಾರ್ಯ ಪ್ಲಾಟ್ ಮನೆಗಳ ಸಂಖ್ಯೆ ಹೆಚ್ಚಿಸಬೇಕು, ಶಿರಹಟ್ಟಿ ಪಟ್ಟಣದಲ್ಲಿ ಅನಾವರಣಗೊಂಡು ದುಃಸ್ಥಿತಿಯಲ್ಲಿರುವ ಎಪಿಎಂಸಿ ಮಾರುಕಟ್ಟೆ ಸಮರ್ಪಕ ಬಳಕೆಗೆ ವಿಶೇಷ ಯೋಜನೆ, ಜಿಲ್ಲೆಯ ಈ ಎಲ್ಲ ಸಮಸ್ಯೆಗಳಿಗೆ ಈ ಬಜೆಟ್ ಮಂಡನೆಯಲ್ಲಿ ವಿಶೇಷ ಹಣಕಾಸು ಪ್ಯಾಕೇಜ್ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯದ ಸಮಗ್ರ ಅಭಿವೃದ್ಧಿ ಹಾಗೂ ಶೋಷಿತ ಸಮುದಾಯಗಳ ಕಲ್ಯಾಣಕ್ಕಾಗಿ ಯೋಜನೆಗಳನ್ನು ರೂಪಿಸುವ ಸಲುವಾಗಿ ಮುಂಬರುವ ಬಜೆಟ್‌ನಲ್ಲಿ ಆದ್ಯತೆ ನೀಡಬೇಕೆಂದು ಆಗ್ರಹಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷದ ಪದಾಧಿಕಾರಿಗಳು ಆಗ್ರಹಿಸಿದರು.

ಗದಗ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ, ಎಸ್.ಡಿ.ಪಿ.ಐ ಪಕ್ಷದ ವತಿಯಿಂದ ಈಗಾಗಲೇ ಜನತಾ ಬಜೆಟ್ ಪುಸ್ತಕದಲ್ಲಿ ಮಂಡಿಸಿರುವ ಎಲ್ಲಾ ಜನಪರ ಯೋಜನೆಗಳಿಗೆ ಹಣ ಮೀಸಲಿಡಬೇಕು, ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಿಗೆ ವಿಶೇಷ ಆದ್ಯತೆ ನೀಡಬೇಕು, ವಿಶೇಷವಾಗಿ ಗದಗ ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಹಲವು ಜ್ವಲಂತ ಸಮಸ್ಯೆಗಳು ಇದ್ದು, ಜಿಲ್ಲೆಯಲ್ಲಿನ ನಿರುದ್ಯೋಗ ಸಮಸ್ಯೆ ಹೋಗಲಾಡಿಸಲು ಸಣ್ಣ ಮತ್ತು ಬೃಹತ್ ಕೈಗಾರಿಕೆಗಳ ಸ್ಥಾಪನೆ ಮತ್ತು ಉತ್ತೇಜನ ನೀಡಬೇಕು ಎಂದು ಒತ್ತಾಯಿಸಿದರು.

ಗದಗ-ಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಕುಡಿಯುವ ನೀರಿನ 24*7 ಕುಡಿಯುವ ನೀರಿನ ಯೋಜನೆ ಅಪೂರ್ಣಗೊಂಡಿದ್ದು, ಶೀಘ್ರವೇ ಪೂರ್ಣಗೊಳಿಸಿ ನಗರದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಗದಗ-ಬೆಟಗೇರಿ ನಗರದಲ್ಲಿ ರಸ್ತೆ, ಒಳಚರಂಡಿ, ಬೀದಿ ದೀಪ ಸೇರಿದಂತೆ ಮೂಲಭೂತ ಸೌಕರ್ಯಗಳಿಗೆ ವಿಶೇಷ ಹಣ ಬಿಡುಗಡೆ ಮಾಡಬೇಕು. ಗದಗ ನಗರ ಕೇಂದ್ರದಲ್ಲಿ ರಕ್ತ ಭಂಡಾರ ನಿರ್ಮಿಸುವುದು, ವಿಶ್ವವಿದ್ಯಾಲಯ ಸ್ಥಾಪನೆ, ಬೆಟಗೇರಿ ಭಾಗದಲ್ಲಿ ಅಲ್ಪಸಂಖ್ಯಾತ ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಶಾಲೆ ನಿರ್ಮಾಣ, ಅಲ್ಪಸಂಖ್ಯಾತ ಹಾಸ್ಟೆಲ್ ನಿರ್ಮಾಣ, ನರಗುಂದ ಹಾಗೂ ಗದಗ ನಗರದಲ್ಲಿ ಅಲ್ಪಸಂಖ್ಯಾತರ ಶಾದಿಮಹಲ್ ನಿರ್ಮಾಣ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಸ್.ಡಿ.ಪಿ.ಐ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಫ್ಘಾನ್ ತರಾಫ್ದರ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಜಿಲ್ಲಾ ಖಜಾಂಚಿ ಮದಾರ್‌ಶಾಹ್ ಮಕಾನದಾರ್, ಗದಗ ಕ್ಷೇತ್ರ ಸಮಿತಿ ಕಾರ್ಯದರ್ಶಿ ಸಮೀರ್ ಕೊಟ್ಟೂರ್, ಶಿರಹಟ್ಟಿ ಕ್ಷೇತ ಸಮಿತಿ ಅಧ್ಯಕ್ಷ ಇಸ್ಮಾಯಿಲ್ ನದಾಫ್ ಹಾಗೂ ಕಾರ್ಯದರ್ಶಿ ಅಬ್ದುಲ್ಖಾದರ್ ಕಾಗದಗಾರ, ಫಯಾಜ್ ಪಟೇಲ್, ಮುಸ್ತಾಕ್ ಹೊಸಮನಿ, ಮುಬಾರಕ್ ಗದಗ, ಮುಸ್ತಾಕ್ ಕಟ್ಟಿಮನಿ, ಅಷ್ಫಾಕ್ ಧಾರವಾಡ, ವಾಸೀಮ್ ರಬಕವಿ, ವಿಮೆನ್ ಇಂಡಿಯಾ ಮೂವ್ಮೆಂಟ್ ಅಧ್ಯಕ್ಷರಾದ ಸುಮಯ್ಯ ಬಳ್ಳಾರಿ, ಕಾರ್ಯದರ್ಶಿ ಕಾಜಲ್ ಬಾಗೇವಾಡಿ ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಜಿಲ್ಲಾ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅವರು ಫೆಬ್ರವರಿ 26 ರಂದು ಗದಗ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಅವರು ಬೆಳಿಗ್ಗೆ 9.30 ಗಂಟೆಗೆ ಹುಬ್ಬಳ್ಳಿಯಿಂದ ಹೊರಟು 10.30 ಗಂಟೆಗೆ ಗದಗಿಗೆ ಆಗಮಿಸಲಿದ್ದಾರೆ. ನಂತರ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ರಿ), ಬೆಂಗಳೂರು ಜಿಲ್ಲಾ ಘಟಕ - ಗದಗ ಇವರಿಂದ ಹಮ್ಮಿಕೊಂಡಿರುವ, ಅವ್ವ ಸೇವಾ ಟ್ರಸ್ಟ್ ವತಿಯಿಂದ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ರಾಜ್ಯ ಮಟ್ಟದ ಮಹಿಳಾ ಪತ್ರಕರ್ತೆಗೆ ನೀಡುವ ದತ್ತಿ ನಿಧಿಯ 2025ನೇ ಸಾಲಿನ ಪ್ರಶಸ್ತಿ ಪ್ರಧಾನ ಸಮಾರಂಭ ಹಾಗೂ ವಿಚಾರ ಸಂಕಿರಣದಲ್ಲಿ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದ ನಂತರ ಮಧ್ಯಾಹ್ನ 2 ಗಂಟೆಗೆ ಗದಗದಿಂದ ಬೆಂಗಳೂರಿಗೆ ರಸ್ತೆ ಮಾರ್ಗವಾಗಿ ಪ್ರಯಾಣಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಸಭಾಪತಿ ಬಸವರಾಜ ಹೊರಟ್ಟಿ ಜಿಲ್ಲಾ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬಸವರಾಜ ಹೊರಟ್ಟಿ ಅವರು ಫೆಬ್ರವರಿ 26ರಂದು ಗದಗ ಜಿಲ್ಲೆಗೆ ಭೇಟಿ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಅವರು ಬೆಳಿಗ್ಗೆ 7 ಗಂಟೆಗೆ ಮಂತ್ರಾಲಯದಿಂದ ರಸ್ತೆ ಮಾರ್ಗವಾಗಿ ಹೊರಟು, ಬೆಳಿಗ್ಗೆ 11 ಗಂಟೆಗೆ ಗದಗಕ್ಕೆ ಆಗಮಿಸಲಿದ್ದಾರೆ.

ನಂತರ ನಾಗಾವಿಯ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಬಸವರಾಜ ಎಸ್. ಹೊರಟ್ಟಿ ಅವರ ಮಾತೋಶ್ರೀರವರ ಹೆಸರಿನಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರದಾನಗೊಳ್ಳುವ 'ಅವ್ವ ಪ್ರಶಸ್ತಿ' ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 12.30 ಗಂಟೆಗೆ ಗದಗದಿಂದ ಹುಬ್ಬಳ್ಳಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಎಂ.ಟಿ.ಬಿ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಜಿಲ್ಲೆಯ ಕ್ರೀಡಾಪಟುಗಳ ಸಾಧನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಅರುಣಾಚಲ ಪ್ರದೇಶದ ರೋಯಿಂಗ್‌ನಲ್ಲಿ ನಡೆದ 22ನೇ ರಾಷ್ಟ್ರ ಮಟ್ಟದ ಎಂ.ಟಿ.ಬಿ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕ ರಾಜ್ಯದಿಂದ ಗದಗ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದ ಸೈಕ್ಲಿಂಗ್ ಕ್ರೀಡಾಪಟುಗಳು ಭಾಗವಹಿಸಿ ಸಾಧನೆ ಮೆರೆದಿದ್ದಾರೆ.

ಪ್ರಿಯಾಂಕಾ ಲಮಾಣಿ, U/14 ವಿಭಾಗದ XCO ಕ್ರೀಡೆಯಲ್ಲಿ ಕಂಚಿನ ಪದಕ, ಸೌಂದರ್ಯ ಅಂತಾಪೂರ U/16 ವಿಭಾಗದ ಫಿಅಜಿ ಕ್ರೀಡೆಯಲ್ಲಿ ಕಂಚಿನ ಪದಕ ಪಡೆದಿದ್ದಾ. ಭಾಗ್ಯಾ ಮೇಲ್ಮನಿ ಇವರು U/14 ವಿಭಾಗದ XCT ಕ್ರೀಡೆಯಲ್ಲಿ 5ನೇ ಸ್ಥಾನ ಹಾಗೂ ಪಲ್ಲವಿ ಕುರಿ ಭಾಗವಹಿಸಿ ಗದಗ ಜಿಲ್ಲೆಗೆ ಕೀರ್ತಿಯನ್ನು ತಂದಿದ್ದಾರೆ.

ಸದರಿ ಸೈಕ್ಲಿಂಗ್ ಕ್ರೀಡಾಪಟುಗಳಿಗೆ ಹಾಗೂ ಸೈಕ್ಲಿಂಗ್ ತರಬೇತುದಾರರಾದ ವಿದ್ಯಾ ಕುಲಕರ್ಣಿ ಇವರಿಗೆ ಸಚಿವ ಡಾ. ಎಚ್.ಕೆ. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಹಾಗೂ ಕಛೇರಿ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಸರ್ಕಾರದ ಧ್ವನಿ-ಮಾಧ್ಯಮದ ಪ್ರತಿಧ್ವನಿ: ಮಧ್ಯೆ ಪ್ರಭಾಕರ್ ಪಾತ್ರ

**ಒಂದು ವಿಶೇಷ ವರದಿ - ನಿಂಗನಗೌಡ ಬಿ ಪಾಟೀಲ್**

**■ ವಿಜಯಸಾಕ್ಷಿ ಸುದ್ದಿ, ಗದಗ**

ಪತ್ರಿಕೋದ್ಯಮವು ಕೇವಲ ವೃತ್ತಿ ಮಾತ್ರವಲ್ಲ, ಅದು ಸಮಾಜದ ಮನಸ್ಸನ್ನು ಓದುವ ಕಲೆ. ಆ ಕಲೆಯನ್ನು ಬದುಕಿನ ತತ್ವವನ್ನಾಗಿಸಿಕೊಂಡವರಲ್ಲಿ ಪ್ರಮುಖರು ಕೆ. ವಿ. ಪ್ರಭಾಕರ್. ವರದಿಗಾರನಾಗಿ ಆರಂಭವಾದ ಅವರ ಪಯಣ ಇಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರರ ಹುದ್ದೆಯವರೆಗೆ ವಿಸ್ತರಿಸಿದೆ.

ರತ್ನಾಕರವಾಣಿ ಕನ್ನಡ ದಿನಪತ್ರಿಕೆಯ ನೂತನ ಕಾರ್ಯಾಲಯಕ್ಕೆ ಅವರ ಭೇಟಿ, ಕೇವಲ ಸೌಜನ್ಯ ಕಾರ್ಯಕ್ರಮವಲ್ಲ ಅದು ಒಂದು ಪಯಣದ ಪ್ರತಿಬಿಂಬ.

ಕೋಲಾರ ಜಿಲ್ಲೆಯ ಮೂಲದ ಪ್ರಭಾಕರ್ ಅವರು ಪತ್ರಿಕೋದ್ಯಮದ ನೆಲೆಯಿಂದಲೇ ತಮ್ಮ ವೃತ್ತಿಜೀವನ ಆರಂಭಿಸಿದರು. ವರದಿಗಾರ, ಮುಖ್ಯ ವರದಿಗಾರ ಹಂತಗಳನ್ನು ದಾಟಿ, ರಾಜ್ಯದ ಪ್ರಮುಖ ದಿನಪತ್ರಿಕೆಗಳಲ್ಲಿ ತಮ್ಮದೇ ಗುರುತು ಮೂಡಿಸಿದರು. ಸಮಾಜದ ಅಂಕು-ಡೊಂಕುಗಳನ್ನು



ತಿದ್ದುವ ತೀಕ್ಷ್ಣ ಬರವಣಿಗೆ ಮತ್ತು ವಿಚಾರದ ಸ್ಪಷ್ಟತೆಯೇ ಅವರನ್ನು ರಾಜ್ಯದ ಮನೆಮಾತಾಗಿಸಿತು.

ಪತ್ರಕರ್ತನ ಕಣ್ಣು ಸಮಾಜದ ಒಳಹೊರಗಿನ ಅಸಮಾನತೆಗಳನ್ನು ಗಮನಿಸುತ್ತದೆ. ಪ್ರಭಾಕರ್ ಅವರ ಬರಹಗಳಲ್ಲಿ ಆ ಸಾಮಾಜಿಕ ಹೊಣೆಗಾರಿಕೆ ಸದಾ ಸ್ಪಷ್ಟವಾಗಿತ್ತು.

ಸಿಎಂಒ ದ್ವಾರದಲ್ಲಿ ಮಾಧ್ಯಮದ ಧ್ವನಿ 2013-2018ರ ಅವಧಿಯಲ್ಲಿ ಸಿದ್ದರಾಮಯ್ಯ ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದಾಗಲೇ ಪ್ರಭಾಕರ್ ಅವರು ಮಾಧ್ಯಮ ಸಮನ್ವಯಕರಾಗಿ ಸೇವೆ ಸಲ್ಲಿಸಿದ್ದರು. 2023ರಲ್ಲಿ ಮಾಧ್ಯಮ ಸಲಹೆಗಾರರಾಗಿ ನೇಮಕವಾಗಿದ್ದು, ಅವರ ಅನುಭವಕ್ಕೆ ದೊರೆತ ಮಾನ್ಯತೆಯೇ ಸರಿ. ಸರ್ಕಾರದ ಕಾರ್ಯಾಲಯ ಮತ್ತು ಮಾಧ್ಯಮಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವುದು ಸುಲಭದ ಕಾರ್ಯವಲ್ಲ. ಒಂದೆಡೆ ಆಡಳಿತದ ದೃಷ್ಟಿಕೋನ, ಮತ್ತೊಂದೆಡೆ ಮಾಧ್ಯಮಗಳ ಪ್ರಶ್ನಿಸುವ ಮನೋಭಾವ - ಈ ಎರಡು ತುದಿಗಳನ್ನು ಸಮತೋಲನಗೊಳಿಸುವ ಸಾಮರ್ಥ್ಯ ಅವರಿಗೆ ಇದೆ ಎಂಬುದು ಅವರ ಕಾರ್ಯಶೈಲಿಯಿಂದ ಸ್ಪಷ್ಟ.

ಸಚಿವ ಸಂಪುಟ ದರ್ಜೆಯ ಸ್ಥಾನಮಾನ ದೊರೆತಿರುವುದು, ಈ ಹುದ್ದೆಯ ಮಹತ್ವವನ್ನು ಇನ್ನಷ್ಟು ಎತ್ತಿ ತೋರಿಸುತ್ತದೆ.

**ಜಿಲ್ಲಾ ಪತ್ರಕರ್ತರಿಗೆ ಪ್ರೋತ್ಸಾಹದ ಸ್ಪರ್ಶ:** ರತ್ನಾಕರವಾಣಿ ದಿನಪತ್ರಿಕೆಯ ನೂತನ ಕಾರ್ಯಾಲಯ ವೀಕ್ಷಣೆಗೆ ಉಗಮಿಸುವ ಕೆ ವಿ ಪ್ರಭಾಕರ್ ಅವರ ಭೇಟಿ, ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಆತ್ಮವಿಶ್ವಾಸ ತುಂಬಲಿದೆ. ರಾಜ್ಯದ ಕಟ್ಟಕಡೆಯ ಭಾಗದಲ್ಲಿರುವ ಪತ್ರಕರ್ತರೂ ಸರ್ಕಾರದ ಮಾಹಿತಿ ವ್ಯವಸ್ಥೆಯ ಭಾಗವಾಗಬೇಕು ಎಂಬ ಸಂದೇಶ ಈ ಭೇಟಿಯಿಂದ ಹೊರಹೊಮ್ಮಲಿದೆ. ಯುವ ಪತ್ರಕರ್ತರಿಗೆ ಸ್ಫೂರ್ತಿ: ಪ್ರಭಾಕರ್ ಅವರ ಪಯಣವು ಯುವ ಪತ್ರಕರ್ತರಿಗೆ ಸ್ಪಷ್ಟ ಸಂದೇಶ ನೀಡುತ್ತದೆ. ಪರಿಶ್ರಮ, ಅಧ್ಯಯನ, ನಿಷ್ಠೆ ಇದ್ದರೆ ಪತ್ರಿಕೋದ್ಯಮವು ಅನೇಕ ಅವಕಾಶಗಳ ಬಾಗಿಲು ತೆರೆದುಕೊಡುತ್ತದೆ. ಆಡಳಿತದೊಳಗೆ ಕಾರ್ಯನಿರ್ವಹಿಸಿದರೂ ಪತ್ರಿಕೋದ್ಯಮದ ಮೂಲ ಮೌಲ್ಯಗಳನ್ನು ಮರೆಯದೇ ಇರಬಹುದೆಂಬುದಕ್ಕೆ ಅವರು ಉದಾಹರಣೆ. ರತ್ನಾಕರವಾಣಿ ನೂತನ ಕಾರ್ಯಾಲಯಕ್ಕೆ ಅವರ ಆಗಮನವು ಸ್ಥಳೀಯ ಮಾಧ್ಯಮ ವಲಯಕ್ಕೆ ಗೌರವದ ಕ್ಷಣವಾಗಿದ್ದು, ಮಾಧ್ಯಮ-ಸರ್ಕಾರ ಸಂಬಂಧದ ಗಾಢತೆಯನ್ನು ಮತ್ತೊಮ್ಮೆ ನೆನಪಿಸಲಿದೆ.ಪತ್ರಕರ್ತನ ಕಲಮಿನಿಂದ ಆರಂಭವಾದ ಪಯಣ, ಇಂದು ಆಡಳಿತದ ನೀತಿ ಸಂವಹನದ ಕೇಂದ್ರಬಿಂದುವಿಗೆ ತಲುಪಿದೆ. ಈ ಪಯಣವು ಕೇವಲ ವ್ಯಕ್ತಿಯ ಸಾಧನೆ ಅಲ್ಲ - ಅದು ಪತ್ರಿಕೋದ್ಯಮದ ಸಾಮರ್ಥ್ಯದ ಕಥೆಯಾಗಿದೆ.


### ಯುವ ಪತ್ರಕರ್ತರಿಗೆ ಕೆ.ವಿ. ಪ್ರಭಾಕರ್ ಮಾದರಿ



ಕೆ.ವಿ. ಪ್ರಭಾಕರ್ ಅವರು ಅತ್ಯುತ್ತಮ ಗುಣಗಳನ್ನು ಅಳವಡಿಸಿಕೊಂಡಿದ್ದು, ಯುವ ಪತ್ರಕರ್ತರಿಗೆ ಮಾದರಿಯಾಗಿದ್ದಾರೆ. ಪತ್ರಿಕೋದ್ಯಮದಲ್ಲಿನ ಅವರ ತತ್ವ ಮತ್ತು ಆದರ್ಶಗಳನ್ನು ಇಂದಿನ ಪತ್ರಕರ್ತರು ಅಳವಡಿಸಿಕೊಳ್ಳಬೇಕು. ರತ್ನಾಕರವಾಣಿ ಕನ್ನಡ ದಿನಪತ್ರಿಕೆ ಮಾಧ್ಯಮ ಪಟ್ಟಿಗೆ ಸೇರುವಲ್ಲಿ ಕೆ.ವಿ. ಪ್ರಭಾಕರ್ ಅವರ ಪಾತ್ರ ಬಹುಮುಖ್ಯವಾಗಿತ್ತು. ಅವರು ನಮ್ಮ ಕಚೇರಿಗೆ ಆಗಮಿಸುತ್ತಿರುವುದು ಅತೀವ ಸಂತಸ ತಂದಿದೆ.

**- ಜಗದೀಶ್ ಎಸ್.ಪಿ,**
ಸಂಪಾದಕರು, ರತ್ನಾಕರವಾಣಿ ಕನ್ನಡ ದಿನಪತ್ರಿಕೆ.

### ಜಿಲ್ಲೆಗೆ ಆಗಮನ ಖುಷಿ ತಂದಿದೆ



ಮಾಧ್ಯಮ ಕ್ಷೇತ್ರದಲ್ಲಿ ಕೆ.ವಿ. ಪ್ರಭಾಕರ್ ಅವರಿಗೆ ಅಪಾರ ಅನುಭವವಿದೆ. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಆಯ್ಕೆಯಾಗಿರುವುದು ಪತ್ರಕರ್ತರಿಗೆ ಹಲವು ಅನುಕೂಲಗಳನ್ನು ತಂದಿದೆ. ರಾಜ್ಯದ ಕಟ್ಟಕಡೆಯ ಪತ್ರಕರ್ತರಿಗೂ ಇನ್ನೂ ಹೆಚ್ಚಿನ ಸೌಲಭ್ಯಗಳು ದೊರಕಲಿ. ಜಿಲ್ಲೆಗೆ ಅವರ ಆಗಮನ ಖುಷಿ ತಂದಿದೆ.

**- ಎಚ್.ಎಂ. ಶರೀಫನವರ,** ಸಂಪಾದಕರು, ವಿಜಯಸಾಕ್ಷಿ ದಿನಪತ್ರಿಕೆ.

## ಭಕ್ತಿಭಾವದಲ್ಲಿ ಗುರು ರಾಘವೇಂದ್ರ ವರ್ಧಂತಿ ಆಚರಣೆ: ಬನಶಂಕರಿ ದೇವಸ್ಥಾನದಲ್ಲಿ ಪೂಜೆ-ಭಜನೆ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಳೇ ಹಗರಿಬೊಮ್ಮನಹಳ್ಳಿಯ ಶ್ರೀ ಗುರು ರಾಘವೇಂದ್ರ ಪಾದಯಾತ್ರೆ ಸೇವಾ ಸಮಿತಿ ವತಿಯಿಂದ ಶ್ರೀ ಗುರು ರಾಘವೇಂದ್ರ ಸ್ವಾಮೀಜಿ ಅವರ 431ನೇ ವರ್ಧಂತಿಯನ್ನು ಭಕ್ತಿಪೂರ್ವಕವಾಗಿ ಆಚರಿಸಲಾಯಿತು.

ಪಟ್ಟಣದ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶೇಷ ಪೂಜೆ, ಭಜನೆ ಹಾಗೂ ಮಹಾಪ್ರಸಾದ ವಿತರಣೆ ನಡೆಯಿತು. ಬೆಳಗ್ಗಿನಿಂದಲೇ ಭಕ್ತರು ದೇವಾಲಯಕ್ಕೆ ಆಗಮಿಸಿ ಶ್ರೀಗುರುಗಳ ದರ್ಶನ ಪಡೆದು ಆಶೀರ್ವಾದಕ್ಕೆ ಪಾತ್ರರಾದರು.

ಕಾರ್ಯಕ್ರಮದಲ್ಲಿ ಗುರುಸ್ವಾಮಿ ಜಿ, ಪಾಂಡುರಂಗ ಜೋಗದ, ಸುದರ್ಶನ್ ದಾದಮ್ಮನವರ, ವಿಜಯೇಂದ್ರ ಜೀ, ಸುಧೀಂದ್ರ ಅರ್ಚಕರು, ಬನ್ನಿಗೋಡ್ ರಾಮಜ್ಜ, ಹುಗ್ಗಿ ಕೊಟ್ರಪ್ಪ ಶಿಕ್ಷಕರು, ನಾಗರಾಜ ಅರಗೊಂಡನಹಳ್ಳಿ, ದೊಡ್ಡಬಸಪ್ಪ, ಹುಗ್ಗಿ ಅವಿನಾಶ್, ದಾದಮ್ಮನವರ ರಾಕೇಶ್, ಕುಮಾರಸ್ವಾಮಿ ಎಸ್, ನಂದಿಸ್ವಾಮಿ, ಅಜೇಯ್, ವಿಭೂತಿ ಹೊಸಕೇರಿ, ಅಜ್ಜಪ್ಪ ಸಂಕ್ಲಾಪುರ, ಮಾರುತಿ ಬಲಹುಣಸಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸಮಿತಿ ವತಿಯಿಂದ ಪ್ರಸಾದ ವ್ಯವಸ್ಥೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸಲಾಗಿದ್ದು, ಕಾರ್ಯಕ್ರಮವು ಶ್ರದ್ಧಾ-ಭಕ್ತಿಯ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.



ಗದುಗಿನ ಕಳಸಾಪುರ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಶಾಖಾ ಮಠದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳಿಗೆ ಪಂಚಾಮೃತ ಅಭಿಷೇಕ, ಅಷ್ಟಾಕ್ಷರ ಹೋಮ ನಡೆಯಿತು. ಸಾವಿರಾರು ಭಕ್ತರು ಆಗಮಿಸಿ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಆಶೀರ್ವಾದ ಪ್ರಸಾದ ಸ್ವೀಕಾರ ಮಾಡಿದರು.

## ಶಾದಿ ಮಹಲ್ ಬಾಡಿಗೆ ಇಳಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅಂಜುಮನ್-ಎ-ಇಸ್ಲಾಂ ಸಂಸ್ಥೆ ವತಿಯಿಂದ ಗದಗ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾಧಿಕಾರಿಗಳಿಗೆ ಅಂಜುಮನ್ ಸಂಸ್ಥೆಯ ಅಧ್ಯಕ್ಷರಾದ ಅನ್ವರ ಬಾಗೇವಾಡಿ ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.

ಗದಗ-ಬೆಟಗೇರಿ ಅವಳಿ ನಗರದಲ್ಲಿರುವ ಶಾದಿ ಮಹಲ್‌ಗಳು ಮೇಲುಸ್ತುವಾರಿ ನಡೆಸುತ್ತಿರುವ ಸಂಸ್ಥೆಗಳ ಸ್ವಂತ ಆಸ್ತಿಗಳಾಗಿಬಿಟ್ಟಿವೆ. ಇದರಿಂದ ಬಡ ಜನರಿಗೆ ತಮ್ಮ ಮಕ್ಕಳ ಮದುವೆ ಹಾಗೂ ಇತರೆ ಕಾರ್ಯಕ್ರಮಗಳನ್ನು ಮಾಡಬೇಕಾದಲ್ಲಿ ಸದರಿ ಹಾಲ್‌ಗಳಿಗೆ ಹೆಚ್ಚಿನ ಬಾಡಿಗೆ ಕೊಡಲು ಕಷ್ಟಕರವೆನಿಸುತ್ತಿದೆ. ಹಾಲ್‌ಗಳನ್ನು ನಿರ್ಮಿಸಿದ ಜಾಗ ಸರಕಾರಿ ಆಸ್ತಿಯಾಗಿದ್ದು, ಕಟ್ಟಡ ನಿರ್ಮಾಣಕ್ಕೆ ಅಲ್ಪಸಂಖ್ಯಾತರ ಸಮುದಾಯದ ಏಳಿಗೆ/ಉನ್ನತಿಗಾಗಿ ಮೀಸಲಿಟ್ಟ ಹಣ ಖರ್ಚು ಮಾಡಿದೆ.

ಇಂತಹ ಮದುವೆ ಹಾಲ್‌ಗಳು ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಸಿಗುವಂತೆ ಮಾಡಿಕೊಡಬೇಕೆಂದು ಅಲ್ಪಸಂಖ್ಯಾತರ ಕಲ್ಯಾಣ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆ ಕಾರ್ಯದರ್ಶಿ ಅಲ್ತಾಫ ಕೊಪ್ಪಳ, ಸದಸ್ಯರುಗಳಾದ ಮಹಮ್ಮದಸೋಹಿಲ್ ನಾರಾಯಣಕೇರಿ, ಹಿದಾಯತ ಕಾಗದಗಾರ, ಮೆಹಬೂಬ ಕದಡಿ, ಮೈನುದ್ದಿನ ಬಿಜಾಪುರ, ಸಮಾಜದ ಮುಖಂಡರಾದ ಹಾಜಿಅಲಿ ಕೊಪ್ಪಳ, ಸಮೀರ ತಾಂಬೋಲಿ, ಜಿಲಾನಿ ಖಾಜಿ ಮುಂತಾದವರಿದ್ದರು.



ಫೆ. 26ರಂದು ನಡೆಯುವ 'ಮಾಧ್ಯಮ ಚೇತನ ಪ್ರಶಸ್ತಿ' ಪ್ರದಾನ ಕಾರ್ಯಕ್ರಮದ ನಿಮಿತ್ತ ಲೇಖನ

# ಮಾಧ್ಯಮ ಮಿತ್ರರಿಗೆ ಮಮತೆ ಹಂಚುವ 'ಅವ್ವ ಟ್ರಸ್ಟ್'





ಅವ್ವ ಸೇವಾ ಟ್ರಸ್ಟ್ ಹುಬ್ಬಳ್ಳಿ ಇವರು ಸ್ಥಾಪಿಸಿದ ದತ್ತಿನಿಧಿಯಿಂದ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣಾರ್ಥ ರಾಜ್ಯಮಟ್ಟದಲ್ಲಿ ಮಹಿಳಾ ಪತ್ರಕರ್ತೆಗೆ ನೀಡುವ ದತ್ತಿನಿಧಿಯ 2025-26ನೇ ಸಾಲಿನ ಪ್ರಶಸ್ತಿ ಪ್ರದಾನ, ಪತ್ರಿಕಾ ದಿನಾಚರಣೆ ಹಾಗೂ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಫೆ. 26ರಂದು ಬೆಳಿಗ್ಗೆ 10.30 ಗಂಟೆಗೆ ಕೌಶಲ್ಯ ವಿಕಾಸ ಭವನದ ಸಭಾಂಗಣ, ಗ್ರಾಮ ಗಂಗೋತ್ರಿ ಆವರಣ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ನಾಗಾವಿ, ಗದಗದಲ್ಲಿ ಜರುಗಲಿದೆ.

2025-26ನೇ ಸಾಲಿನ ಪ್ರಶಸ್ತಿಗೆ ಭಾಜನರಾದ ತನುಜಾ ನಾಯಕ ಅವರ ಜೀವಮಾನದ ಸಾಧನೆಯನ್ನು ಗೌರವಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಅವರಿಗೆ ಶುಭ ಕೋರೋಣ ಬನ್ನಿ ಎಂದು ಟ್ರಸ್ಟಿನ ಕಾರ್ಯದರ್ಶಿ ಶಶಿ ಸಾಲಿ, ಗದಗ ಸಂಚಾಲಕರಾದ ಡಾ. ಬಸವರಾಜ ಧಾರವಾಡ ವಿನಂತಿಸಿದ್ದಾರೆ.

ವಿಧಾನ ಪರಿಷತ್ತಿನ ಸಭಾಪತಿಗಳು ಹಾಗೂ ಮೇಲ್ಮನೆಯ ಹಿರಿಯ ಸದಸ್ಯರಾದ ಬಸವರಾಜ ಹೊರಟ್ಟಿಯವರು ತಮ್ಮ ತಾಯಿ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣಾರ್ಥ 'ಅವ್ವ ಸೇವಾ ಟ್ರಸ್ಟ್'ನ್ನು ಪೂಜ್ಯ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸನ್ನಿಧಾನದಲ್ಲಿ 2011ರಲ್ಲಿ ಪ್ರಾರಂಭಿಸಿದರು. ಅವ್ವನ ಹೆಸರಿನಲ್ಲಿ ಸಮಾಜ ಸೇವೆಗೆ ಸಮರ್ಪಿಸಿಕೊಂಡ ಈ ಸಂಸ್ಥೆ ದಶಕಗಳಿಂದ ವಿಧಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನೇಕರ ಬಾಳಿಗೆ ಬೆಳಕಾಗಿದೆ.

ನಾಡಿನ 100ಕ್ಕೂ ಅಧಿಕ ದಿವ್ಯಾಂಗರಿಗೆ ಟ್ರೈಸಿಕಲ್ ನೀಡಿ ಆಸರೆ ಕಲ್ಪಿಸಿದೆ. ಸಮಾಜ ಸೇವೆಯ ಜೊತೆಗೆ ಇತರೆ ಕ್ಷೇತ್ರಗಳಲ್ಲಿ ಅಪ್ರತಿಮ ಸೇವೆ ಮಾಡಿದ ಸಾಧಕರಿಗೆ ಅವ್ವ ಪ್ರಶಸ್ತಿ ನೀಡಿ ಗೌರವಿಸಿದೆ. ಧಾರವಾಡ ಜಿಲ್ಲೆಯಲ್ಲಿ 1000ಕ್ಕೂ ಅಧಿಕ ಸಸಿಗಳನ್ನು ವಿತರಿಸಿ ಪರಿಸರ ಸಂರಕ್ಷಣೆಗೆ ಅಳಿಲು ಸೇವೆ ಸಲ್ಲಿಸಿದೆ. ಬೆಳಗಾವಿ ವಿಭಾಗದ 48 ಪ್ರತಿಭಾವಂತ ಜನ ಅಂಧ ವಿಕಲಚೇತನ ವಿದ್ಯಾರ್ಥಿಗಳಿಗೆ ಧನ ಸಹಾಯ ಮಾಡಿದೆ. 80 ಜನ ಹಿರಿಯ ತಾಯಂದಿರಿಗೆ ಗೌರವ ಸಂಮಾನ ಮಾಡಿದೆ. ಅನಾರೋಗ್ಯವಿರುವ ಕುಟುಂಬದ ಮಕ್ಕಳಿಗೆ ಆಸರೆಯಾಗಿದೆ. ಬೆಳಗಾವಿ ವಿಭಾಗದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಅವ್ವನ ಮಹತ್ವದ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿದಾಗ 26 ಸಾವಿರ ಮಕ್ಕಳು ಭಾಗವಹಿಸಿದ್ದು ಅತ್ಯಂತ ಮಹತ್ವದ್ದು.

ಇಂತಹ ಹತ್ತು ಹಲವು ಕಾರ್ಯಕ್ರಮಗಳ ಮೂಲಕ ನೊಂದವರಿಗೆ, ಪ್ರತಿಭಾವಂತರಿಗೆ, ಸಾಧಕರಿಗೆ, ಅವ್ವ ಸೇವಾ ಟ್ರಸ್ಟ್ ನೆರವಿನ ಹಸ್ತ ಚಾಚಿದೆ. ಅನೇಕ ಸಂಘ-ಸಂಸ್ಥೆಗಳಲ್ಲಿ ದತ್ತಿನಿಧಿ ಸ್ಥಾಪಿಸಿ ಸಮಾಜಮುಖಿ ಚಿಂತನೆಗೆ ಹಚ್ಚಿದ್ದಾರೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣಾರ್ಥ 5 ಲಕ್ಷ ರೂ ದತ್ತಿನಿಧಿ ಸ್ಥಾಪಿಸಿ ಪ್ರತಿವರ್ಷ ರಾಜ್ಯಮಟ್ಟದಲ್ಲಿ ಉತ್ತಮ ಮಹಿಳಾ ಪತ್ರಕರ್ತೆಗೆ ಪ್ರಶಸ್ತಿ ನೀಡಲು ಅವಕಾಶ ಕಲ್ಪಿಸಿದ್ದಾರೆ.

ಅವ್ವ ಸೇವಾ ಟ್ರಸ್ಟ್ ಮಾಧ್ಯಮ ಸ್ನೇಹಿತರಿಗೂ ತನ್ನ ಮಮತೆ ಹಂಚುವ ಮೂಲಕ ಆ ಕ್ಷೇತ್ರದಲ್ಲಿ ಜೀವಮಾನದ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಗೌರವಿಸುವ ಕೆಲಸ ಆರಂಭಿಸಿದೆ. ಮೊದಲನೆ ಬಾರಿಯ ಪ್ರಶಸ್ತಿಯನ್ನು ಹಿರಿಯ ಪತ್ರಕರ್ತೆ ರಶ್ಮಿ ಎಸ್ ಅವರಿಗೆ ಹಾಗೂ 2ನೇ ಪ್ರಶಸ್ತಿಯನ್ನು ಹಿರಿಯ ಪತ್ರಕರ್ತೆ ಕೆ.ಎಚ್. ಸಾವಿತ್ರಿ ಅವರಿಗೆ ನೀಡಲಾಗಿದೆ.

ಮೂಲತಃ ವಿಜಯಪುರದವರಾದ ಪತ್ರಕರ್ತೆ ತನುಜಾ ನಾಯಕ ಅವರು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ್ದಾರೆ. ಇವರು ಆರಂಭದ ಕೆಲ ತಿಂಗಳು ಬೆಳಗಾವಿಯಲ್ಲಿ ಕನ್ನಡಮ್ಮ, ನಾಡೋಜ ಮುಂತಾದ ಪತ್ರಿಕೆಗಳಲ್ಲಿ ವರದಿಗಾರ್ತಿಯಾಗಿದ್ದು, 90ರ ದಶಕದ ಅಂತ್ಯದಲ್ಲಿ ಸಂಯುಕ್ತ ಕರ್ನಾಟಕ ಸೇರಿದವರು.

ಸುದೀರ್ಘ 28 ವರ್ಷಗಳಿಂದಲೂ ಸಂಯುಕ್ತ ಕರ್ನಾಟಕದಲ್ಲಿ ಪತ್ರಕರ್ತೆಯಾಗಿರುವ ಇವರು ಪ್ರಸ್ತುತ ಸಂಪಾದಕಿಯಾಗಿದ್ದಾರೆ. ತನುಜಾ ನಾಯಕ ಅವರಿಗೆ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ 2019ರ ಸಾಲಿನ ಎಂ.ಎಂ. ಕಲಬುರ್ಗಿ ಪ್ರಶಸ್ತಿ, ಮೈಸೂರಿನಲ್ಲಿ 2019ರಲ್ಲಿ ನಡೆದ ಕ.ಕಾ.ನಿ.ನ ಸಂಘದ ಸಮ್ಮೇಳನದಲ್ಲಿ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯೆಯಾಗಿ, ಉಪಾಧ್ಯಕ್ಷೆಯಾಗಿ, ಖಜಾಂಚಿಯಾಗಿ ಕಾರ್ಯ ನಿರ್ವಹಿಸಿದ್ದಾರೆ. ಇದೀಗ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತೆಗೆ ಪ್ರಶಸ್ತಿ ನೀಡಲು ಸ್ಥಾಪಿಸಿರುವ ದತ್ತಿ ನಿಧಿಯ 2025ನೇ ಸಾಲಿನ ಪ್ರಶಸ್ತಿಗೆ ಭಾಜನರಾಗಿರುವ ತನುಜಾ ನಾಯಕ ಅವರಿಗೆ ಟ್ರಸ್ಟ್ ಹಾಗೂ ಸಂಘದಿಂದ ಅಭಿನಂದನೆಗಳು. ಬನ್ನಿ ಈ ಅಪರೂಪದ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ವಿಗೆ ಕಾರಣೀಭೂತರಾಗೋಣ.

**- ಡಾ. ಬಸವರಾಜ ಧಾರವಾಡ.**
ಸಂಚಾಲಕರು ಅವ್ವ ಸೇವಾ ಟ್ರಸ್ಟ್, ಗದಗ.

## ಕೃಷಿಯಲ್ಲಿ ನೂತನ ತಂತ್ರಜ್ಞಾನ ಅಳವಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ದಿನಮಾನದಲ್ಲಿ ರೈತರು ವ್ಯವಸಾಯದಲ್ಲಿ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವುದು ಬಹಳ ಮುಖ್ಯ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ್ ಅಭಿಪ್ರಾಯಪಟ್ಟರು.

ಅವರು ಕೃಷಿ ಇಲಾಖೆ ಗದಗ ಹಾಗೂ ರೈತ ಸಂಪರ್ಕ ಕೇಂದ್ರ ಬೆಟಗೇರಿಯ ವತಿಯಿಂದ ಹೊಂಬಳ ಗ್ರಾಮದ ಪ್ರಭುಸ್ವಾಮಿ ಮಠದ ಆವರಣದಲ್ಲಿ ಹಮ್ಮಿಕೊಂಡಿದ್ದ ಪಲ್ಸ್ ಗ್ರೇಡರ್ ಯಂತ್ರದ ಪ್ರಾತ್ಯಕ್ಷಿತೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸದ್ಯದ ಪರಿಸ್ಥಿತಿಯಲ್ಲಿ ಬೆಳೆಗಳ ಮೌಲ್ಯವರ್ಧನೆ ಮಾಡುವುದು ಅತ್ಯಂತ ಅವಶ್ಯಕವಾಗಿದೆ. ಇಂತಹ ಕೆಲಸಕ್ಕಾಗಿಯೇ ಪಲ್ಸ ಗ್ರೇಡರ್ ಯಂತ್ರ ಸಹಕಾರಿಯಾಗಿದೆ. ಒಕ್ಕಣೆ ಸಮಯದಲ್ಲಿ ರೈತರು ಈ ಯಂತ್ರ ಬಳಸಿ ಸಮಯ ಉಳಿತಾಯ ಮಾಡಬಹುದು ಹಾಗೂ ಕೂಲಿ ವೆಚ್ಚವನ್ನು ಕಡಿಮೆಗೊಳಿಸಬಹುದು ಎಂದರು.

ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಮಾತನಾಡಿ, ಪಲ್ಸ್ ಗ್ರೇಡರ್ ಯಂತ್ರವು ಧಾನ್ಯಗಳನ್ನು ಗ್ರೇಡಿಂಗ್ ಮಾಡುವಲ್ಲಿ ರೈತರಿಗೆ ಸಹಕಾರಿಯಾಗಿದೆ. ಈ ಯಂತ್ರದ ಮೂಲಕ ಗಂಟೆಗೆ 25 ಕ್ವಿಂಟಲ್ ಧಾನ್ಯಗಳನ್ನ ಒಕ್ಕಣೆ ಮಾಡಬಹುದು ಎಂದು ತಿಳಿಸಿದರು. ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ್ ಮಾತನಾಡಿ, ರೈತರು ಬೆಳೆಗಳನ್ನು ಮೌಲ್ಯವರ್ಧಿಸಲು ಬಹಳ ಕಷ್ಟವಾಗುತ್ತಿತ್ತು. ಆದರೆ ಇಂದು ಪಲ್ಸ್ ಗ್ರೇಡರ್ ಯಂತ್ರದ ಮೂಲಕ ಗ್ರೇಡಿಂಗ್ ಬಹಳ ಸುಲಭವಾಗಿದೆ. ಸಬ್ಸಿಡಿ ದರದಲ್ಲಿ ಈ ಯಂತ್ರವು ಕೃಷಿ ಇಲಾಖೆಯಲ್ಲಿ ಲಭ್ಯವಿದ್ದು, ರೈತರು ಇದರ ಲಾಭ ಪಡೆದು ಅಭಿವೃದ್ಧಿ ಹೊಂದಬೇಕೆಂದು ಹೇಳಿದರು.

ಕೃಷಿ ಅಧಿಕಾರಿ ಬಸವರಾಜೇಶ್ವರಿ ಸಜ್ಜನರ, ರಾಜು ಕೊರವನವರ, ವಸಂತ ಯಕ್ಲಸಾಪುರ ಸೇರಿದಂತೆ ಗ್ರಾಮದ ರೈತರು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿ ಹಾಜರಿದ್ದರು.

## ಮನವಿಗೆ ಸ್ಪಂದಿಸಿದ ಗೃಹ ಸಚಿವರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಶಿರಹಟ್ಟಿ ತಾಲೂಕಿನ ಗ್ರಾಮಗಳನ್ನು ಶಿರಹಟ್ಟಿ ಪೊಲೀಸ್ ಠಾಣೆಗೆ ಹಾಗೂ ಲಕ್ಷೇಶ್ವರ ತಾಲೂಕಿನ ಗ್ರಾಮಗಳನ್ನು ಲಕ್ಷೇಶ್ವರ ಪೊಲೀಸ್ ಠಾಣೆಯ ವ್ಯಾಪ್ತಿಗೆ ಒಳಪಡಿಸುವಂತೆ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ವಿರೇಂದ್ರಗೌಡ ಪಾಟೀಲ ಮಾಡಿದ ಮನವಿಗೆ ಗೃಹ ಮಂತ್ರಿಗಳು ಸಹಮತ ಸೂಚಿಸಿದ್ದಾರೆ.

ಇದೀಗ ಶಿರಹಟ್ಟಿ ತಾಲೂಕಿನ ಗ್ರಾಮಗಳಾದ ನಾಗರಮಡುವು, ಅಂಕಲಿ, ಗೋವನಕೊಪ್ಪ, ಬಿಜ್ಜೂರ, ಕೊಗನೂರ, ಕೊಂಚಿಗೇರಿ, ಕೊಕ್ಕರಗುಂದಿ, ಬೂದಿಹಾಳ ಗ್ರಾಮಗಳು ಸದ್ಯ ಲಕ್ಷ್ಮೇಶ್ವರ ಪೊಲೀಸ್ ಠಾಣೆಯ ವ್ಯಾಪ್ತಿಗೆ ಒಳಪಡುತ್ತಿವೆ. ಅದರಂತೆ ಲಕ್ಷೇಶ್ವರ ತಾಲೂಕಿನ ಗ್ರಾಮಗಳಾದ ನಾದಿಗಟ್ಟಿ, ವಡ್ಡರಪಾಳ್ಯ, ನೇಲೋಗಲ್, ಮಾಡಳ್ಳಿ, ಯತ್ನಳ್ಳಿ, ಯಳವತ್ತಿ, ಕುಂದ್ರಳ್ಳಿ, ಕುಂದ್ರಳ್ಳಿ ತಾಂಡಾ, ಶೆಟ್ಟಿಕೇರಿ ಗ್ರಾಮಗಳು ಶಿರಹಟ್ಟಿ ಪೊಲೀಸ್ ಠಾಣೆ ವ್ಯಾಪ್ತಿಗೊಳಪಟ್ಟಿವೆ.

ಲಕ್ಷ್ಮೇಶ್ವರ ಸ್ವತಂತ್ರ ತಾಲೂಕು ಕೇಂದ್ರವಾಗಿ 8 ವರ್ಷಗಳೇ ಕಳೆದಿದ್ದರೂ ಇನ್ನೂ ಉಭಯ ತಾಲೂಕಿನ ಅನೇಕ ಗ್ರಾಮಗಳ ಪೊಲೀಸ್ ಠಾಣಾ ವ್ಯಾಪ್ತಿ ಮಾತ್ರ ಬದಲಾಗಿಲ್ಲ. ಇದರಿಂದ ಸಾರ್ವಜನಿಕರು ತಮ್ಮ ಸಣ್ಣಪುಟ್ಟ ವ್ಯಾಜ್ಯಗಳಿಗೆ ಹಾಗೂ ಇತರೇ ವ್ಯಾಜ್ಯಗಳ ಸಲುವಾಗಿ ಅಲೆದಾಡುವುದು ತಪ್ಪಿಲ್ಲ. ಇದರಿಂದ ತಹಸೀಲ್ದಾರ, ಪೊಲೀಸ್ ಅಧಿಕಾರಿಗಳಿಗೆ ಅಪರಾಧಗಳ ಪಂಚನಾಮ ಮಾಡಲು ಹಾಗೂ ನ್ಯಾಯಾಲಯಕ್ಕೆ ಹಾಜರುಪಡಿಸಿಲು ಕಾನೂನು ತೊಡಕು ಆಗುತ್ತಿದೆ.

ಆದ್ದರಿಂದ ಶಿರಹಟ್ಟಿ ತಾಲ್ಲೂಕಿನ ಗ್ರಾಮಗಳನ್ನು ಶಿರಹಟ್ಟಿ ಪೊಲೀಸ್ ಠಾಣೆಗೆ ಹಾಗೂ ಲಕ್ಷೇಶ್ವರ ತಾಲೂಕಿನ ಗ್ರಾಮಗಳನ್ನು ಲಕ್ಷೇಶ್ವರ ಪೊಲೀಸ್ ಠಾಣೆಯ ವ್ಯಾಪ್ತಿಗೆ ವರ್ಗಾವಣೆ ಮಾಡಲು ಕಾನೂನು ಮಂತ್ರಿಗಳಾದ ಹೆಚ್.ಕೆ. ಪಾಟೀಲರ ಶಿಫಾರಸ್ಸಿನ ಮೇರೆಗೆ ಗೃಹ ಮಂತ್ರಿಗಳಿಗೆ ಮನವಿ ಮಾಡಲಾಗಿತ್ತು. ಇದೀಗ ಗೃಹ ಮಂತ್ರಿಗಳು ಮನವಿಗೆ ಸ್ಪಂದಿಸಿರುವುದಕ್ಕೆ ಮತ್ತು ಲಕ್ಷ್ಮೇಶ್ವರ ಠಾಣೆಯನ್ನು ಪಿಐ ಠಾಣೆಯಾಗಿಸಲು ಗ್ರೀನ್ ಸಿಗ್ನಲ್ ನೀಡಿರುವುದಕ್ಕೆ ಸಾರ್ವಜನಿಕರ ಪರವಾಗಿ ವೀರೇಂದ್ರ ಪಾಟೀಲ ಅಭಿನಂದನೆಗಳನ್ನು ತಿಳಿಸಿದ್ದಾರೆ.

ಪುರಸಭೆ ಬಜೆಟ್ ಪೂರ್ವ ಸಭೆ ಗಲಾಟೆಯ ಗೂಡು!

## ಸಿಡಿದೆದ್ದ ಸ್ವ ಪಕ್ಷದ ಸದಸ್ಯರು!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



2026-27ನೇ ಸಾಲಿನ ಬಜೆಟ್ ಪೂರ್ವ ಸಭೆ ಪುರಸಭೆಯಲ್ಲಿ ರಾಜಕೀಯ ಬಿರುಗಾಳಿಗೆ ವೇದಿಕೆಯಾಯಿತು. ಅಧ್ಯಕ್ಷರು ಅನುದಾನದ ಅಂದಾಜು ಹಂಚಿಕೆ ಓದಿ ಮುಗಿಸುತ್ತಿದ್ದಂತೆಯೇ, ಸದಸ್ಯರ ಪ್ರಶ್ನೆಗಳು ಗುಡುಗಿನಂತೆ ಮೊಳಗಿದವು.

"ಎಷ್ಟು ಬಾರಿ ಸಭೆ ಕರೆದಿದ್ದೀರಿ? ಯಾವ ವಾರ್ಡ್ ಅಭಿವೃದ್ಧಿ ಮಾಡಿದ್ದಾರೆ?" ಎಂದು ಸದಸ್ಯ ಗಣೇಶ್ ನೇರ ಪ್ರಶ್ನೆ ಹಾಕಿದ ಕ್ಷಣದಿಂದಲೇ ಸಭೆಯ ವಾತಾವರಣ ತೀವ್ರಗೊಂಡಿತು. ಸಾರ್ವಜನಿಕರ ಸಮಸ್ಯೆಗಳ ಚರ್ಚೆಯಾಗಬೇಕಿದ್ದ ವೇದಿಕೆ, ಗದ್ದಲ ಮತ್ತು ಪರಸ್ಪರ ಆರೋಪಗಳ ಅಖಾಡವಾಯಿತು.

ಮಾಸಿಕ ಸಭೆಗಳು, ತುರ್ತು ಸಭೆಗಳು ನಡೆದಿಲ್ಲ. ಸರ್ವ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ. ಸ್ಥಾಯಿ ಸಮಿತಿ ಅಧ್ಯಕ್ಷರ ಆಯ್ಕೆಯೂ ಆಗಿಲ್ಲ ಎಂದು ದೀಪಕ್ ಸಾ. ಕಠಾರೆ ಖಾರವಾಗಿ ಆರೋಪಿಸಿದರು. ನೆಲ್ಲು ಇಸ್ಮಾಯಿಲ್ ಸಾಬ್, ಅಜೀಜ್ ಹುಲ್ಲಾ, ಜೋಗಿ ಹನುಮಂತಪ್ಪ, ಬಿ.ಡಿ. ಗಂಗಣ್ಣ, ನವೀನ್ ಕುಮಾರ್, ನಾಗರಾಜ್ ಜನ್ನು ಸೇರಿದಂತೆ ಹಲವರು ಸಮರ್ಪಕ ಪೂರ್ವ ಬಜೆಟ್ ಸಭೆ ಕರೆಯಬೇಕೆಂದು ಒತ್ತಾಯಿಸಿದರು.

ಅಧ್ಯಕ್ಷರು "ಜನ ನಮ್ಮ ಕೆಲಸವನ್ನು ಒಪ್ಪಿಕೊಂಡಿದ್ದಾರೆ" ಎಂದು ಸಮರ್ಥಿಸಿಕೊಂಡಾಗ, ಸದಸ್ಯ ಗಣೇಶ್ ತಿರುಗೇಟು ನೀಡುತ್ತಾ, "ನಾವು ಶಾಲಾ ಮಕ್ಕಳು ಅಲ್ಲ, ಜನಪ್ರತಿನಿಧಿಗಳು" ಎಂದು ಗುಡುಗಿದರು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಗ್ಯಾಸ್ ಪೈಪ್ ಕಾಮಗಾರಿಯಿಂದ ರಸ್ತೆ ಹಾನಿಯಾದ ವಿಚಾರವೂ ಸಭೆಯಲ್ಲಿ ಜೋರಾದ ಧ್ವನಿಯಲ್ಲಿ ಕೇಳಿ ಬಂದಿತು. ಕಂಪನಿಯಿಂದ ಪುರಸಭೆ ಎಷ್ಟು ಹಣ ವಸೂಲಿ ಮಾಡಿದೆ ಎಂಬ ಲೆಕ್ಕ ಕೇಳಿದ ಅಂಬಳಿ ರವೀಂದ್ರ ಗೌಡ ಸ್ಪಷ್ಟ ಉತ್ತರ ನೀಡುವಂತೆ ಆಗ್ರಹಿಸಿದರು.

ಸಾರ್ವಜನಿಕರ ಸಮಸ್ಯೆಗಳ ಕುರಿತು ಒಂದು ಠರಾವು ಕೂಡ ಅಂಗೀಕರಿಸದೇ ದಾಖಲೆ ಮಾಡಿಲ್ಲ ಎಂದು ಜೋಗಿ ಹನುಮಂತಪ್ಪ ಪ್ರಶ್ನಿಸಿದರು. ರಾಜೇಶ್ ಬ್ಯಾಡಗಿ "ಸಮಸ್ಯೆಗಳ ಪರಿಹಾರ ಬದಲು ಗದ್ದಲವೇ ಹೆಚ್ಚು" ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಭೆ ಕೆಲಕಾಲ ಗಲಿಬಿಲಿಗೊಂಡ ನಂತರ, ಅಧ್ಯಕ್ಷರು ಮಾರ್ಚ್ 10ರಂದು ಸಾಮಾನ್ಯ ಸಭೆ ಕರೆಯುವುದಾಗಿ ತಿಳಿಸಿದರು. ಆದರೆ ಸದಸ್ಯರು "ಒಂದು ವಾರದೊಳಗೆ ಪೂರ್ವ ಬಜೆಟ್ ಸಭೆ ಕರೆಯಬೇಕು" ಎಂದು ಪಟ್ಟು ಹಿಡಿದರು. ಅಂತಿಮವಾಗಿ ಅಧ್ಯಕ್ಷರು ಒಂದು ವಾರದೊಳಗೆ ಸಭೆ ನಡೆಸುವುದಾಗಿ ಒಪ್ಪಿಗೆ ಸೂಚಿಸಿದರು.

ಜನಪ್ರತಿನಿಧಿಗಳ ಜವಾಬ್ದಾರಿ ಎಲ್ಲಿ? ಜನರ ಸಮಸ್ಯೆಗಳ ಪರಿಹಾರಕ್ಕಾಗಿ ನಡೆಯಬೇಕಿದ್ದ ಸಭೆ ರಾಜಕೀಯ ಕಿತ್ತಾಟಕ್ಕೆ ತಿರುಗಿರುವುದು ಸಾರ್ವಜನಿಕರಲ್ಲಿ ಅಸಮಾಧಾನ ಹುಟ್ಟಿಸಿದೆ. ಈಗ ಪ್ರಶ್ನೆ ಏನೆಂದರೆ - ಮುಂದಿನ ಸಭೆಯಲ್ಲಿ ಸಮಸ್ಯೆಗಳ ಪರಿಹಾರಕ್ಕೆ ಸ್ಪಷ್ಟ ದಿಕ್ಕು ಸಿಗುತ್ತದೆಯೇ? ಅಥವಾ ಪುರಸಭೆ ರಾಜಕೀಯ ಅಸ್ತವ್ಯಸ್ತತೆಗೆ ವೇದಿಕೆಯೇ ಆಗಿ ಉಳಿಯುತ್ತದೆಯೇ? ಹಗರಿಬೊಮ್ಮನಹಳ್ಳಿ ಪಟ್ಟಣದ ಜನತೆ ಮುಂದಿನ ಬೆಳವಣಿಗೆಗಳತ್ತ ಕಾದು ನೋಡುತ್ತಿದ್ದಾರೆ.

## 6.45 ಕೋಟಿ ರೂ. ವೆಚ್ಚದ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಕೊಟ್ಟೂರು

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರವನ್ನು 6.45 ಕೋಟಿ ರೂ. ವೆಚ್ಚದಲ್ಲಿ 30 ಹಾಸಿಗೆಗಳಿಂದ 50 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸುವ ಹೊಸ ಕಟ್ಟಡ ಕಾಮಗಾರಿಗೆ ಸೋಮವಾರ ಬೆಳಿಗ್ಗೆ ಭೂಮಿ ಪೂಜೆ ನೆರವೇರಿಸಲಾಯಿತು. ಹಗರಿಬೊಮ್ಮನಹಳ್ಳಿ ಕ್ಷೇತ್ರದ ಶಾಸಕ ಕೆ. ನೇಮಿರಾಜನಾಯ್ಕ್ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೆ ಕೆಲವರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಆದರೆ ಮುಂದಿನ ದಿನಗಳಲ್ಲಿ ಕ್ಷೇತ್ರದ ಅಭಿವೃದ್ಧಿಯೇ ಅವರಿಗೆ ತಕ್ಕ ಉತ್ತರವಾಗಲಿದೆ ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದರು.

ಹಗರಿಬೊಮ್ಮನಹಳ್ಳಿ, ಮರಿಯಮ್ಮನಹಳ್ಳಿ ಹಾಗೂ ಕೊಟ್ಟೂರು ಪಟ್ಟಣಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಈಗಾಗಲೇ ನೂರಾರು ಕೋಟಿ ರೂ. ಅನುದಾನ ಒದಗಿಸಲಾಗಿದೆ. ಇನ್ನೂ ಹಲವು ಅಭಿವೃದ್ಧಿ ಯೋಜನೆಗಳಿಗೆ ಸರ್ಕಾರ ಬಜೆಟ್‌ನಲ್ಲಿ ಘೋಷಣೆ ಮಾಡುವ ನಿರೀಕ್ಷೆಯಿದೆ. ನಮ್ಮ ಪಕ್ಷದ ಸರ್ಕಾರವಿರದಿದ್ದರೂ ಸಚಿವರು ಹಾಗೂ ಮುಖ್ಯಮಂತ್ರಿಗಳ ಗಮನ ಸೆಳೆದು ಕ್ಷೇತ್ರಕ್ಕೆ ಅನುದಾನ ತರುವ ಕಾರ್ಯವನ್ನು ಮುಂದುವರಿಸಿದ್ದೇನೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಇದೇ ಸಮುದಾಯ ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳ ಆಸ್ಪತ್ರೆಗೆ ಮೇಲ್ದರ್ಜೆಗೇರಿಸುವ ಗುರಿಯಿದೆ. ಕೊಟ್ಟೂರು ಪಟ್ಟಣಕ್ಕೆ ಕುಡಿಯುವ ನೀರಿನ ಅಮೃತ ಯೋಜನೆ, ಹೈಟೆಕ್ ಬಸ್ ನಿಲ್ದಾಣ, ಪದವಿ ಕಾಲೇಜು ನಿರ್ಮಾಣ, ವಾರ್ಡ್‌ಗಳಲ್ಲಿ ರಸ್ತೆ ಅಭಿವೃದ್ಧಿ ಸೇರಿದಂತೆ ಹಲವು ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಜಿ.ಕೆ. ಅಮರೇಶ್, ಮುಖ್ಯಾಧಿಕಾರಿ ನಸರುಲ್ಲಾ, ವೈದ್ಯಾಧಿಕಾರಿ ಬದ್ಯಾ ನಾಯ್ಕ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಜೆಡಿಎಸ್ ಮುಖಂಡರಾದ ಬೂದಿ ಶಿವಕುಮಾರ್, ಎಚ್. ಗುರುಬಸವರಾಜ್, ಡಿಶ್ ಮಂಜುನಾಥ್, ಬಿ. ಶಿವಾನಂದ್, ಟಿ. ಕೊಟ್ರೇಶ್ ಉಪಸ್ಥಿತರಿದ್ದರು.

### ಮಾ. 1ರಂದು ಜೆಡಿಎಸ್ ಬೃಹತ್ ಸಮಾವೇಶ

ಜೆಡಿ ಎಸ್ ಪಕ್ಷವು 25 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಮಾರ್ಚ್ 1ರಂದು 'ಜನರೊಂದಿಗೆ ಜನತಾದಳ' ಎಂಬ ಬೃಹತ್ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ನೇಮಿರಾಜ ನಾಯ್ಕ್ ತಿಳಿಸಿದರು. ಪಕ್ಷದ ಕಾರ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆಯುವ ಈ ಸಮಾವೇಶದಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಮುಖಂಡರು ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

# ವರವಿ ವಿರೂಪಾಕ್ಷ ಸ್ವಾಮಿಗಳ ಪುಣ್ಯಾರಾಧನೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ವರವಿ ಕ್ಷೇತ್ರದ ಬ್ರಹ್ಮಲೀನ ಶ್ರೀ ವಿರೂಪಾಕ್ಷಯ್ಯ ಸ್ವಾಮಿಗಳ 110ನೇ ವಾರ್ಷಿಕ ಪುಣ್ಯಾರಾಧನೆಯ ಸಪ್ತಾಹ ಕಾರ್ಯಕ್ರಮವು ಫೆ. 26ರಿಂದ ಮಾ. 5ರವರೆಗೆ ಶ್ರೀ ಮಠದಲ್ಲಿ ಜರುಗಲಿದೆ.

ಫೆ. 26ರ ಬ್ರಾಹ್ಮೀ ಮುಹೂರ್ತದಲ್ಲಿ ಶಿವನಾಮ ಸ್ಮರಣೆಯೊಂದಿಗೆ ಸಪ್ತಾಹ ಪ್ರಾರಂಭವಾಗಿ ಪ್ರತಿ ದಿವಸ ಬೆಳಿಗ್ಗೆ 8ರಿಂದ 10.30ರವರೆಗೆ ಸಂಗೀತ, ಬ್ರಹ್ಮ ಜಿಜ್ಞಾಸೆ, ಶಾಸ್ತ್ರ ಶ್ರವಣ ನಡೆಯಲಿದೆ.

ಮಾ. 1ರಿಂದ ಮಾ. 3ರವರೆಗೆ ಪ್ರತಿದಿನ ಸಂಜೆ 7.30 ಗಂಟೆಗೆ ಕಾರ್ಯಕ್ರಮಗಳು ನಡೆಯಲಿದ್ದು, ಮಾ. 4ರಂದು ಸಪ್ತಾಹ ಸಮಾರೋಪಗೊಳ್ಳಲಿವೆ.

ಸಮಾರೋಪ ಕಾರ್ಯಕ್ರಮದ ಸಾನ್ನಿಧ್ಯವನ್ನು ಅಣ್ಣಿಗೇರಿ ದಾಸೋಹಮಠದ ಶಿವಕುಮಾರ ಸ್ವಾಮೀಜಿ, ಬನ್ನಿಕೊಪ್ಪದ ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಅಧ್ಯಕ್ಷತೆಯನ್ನು ವರವಿಯ ಮೌನೇಶ್ವರ ಸ್ವಾಮೀಜಿ, ಉದ್ಘಾಟನೆಯನ್ನು ಸಚಿವ ಎಚ್.ಕೆ. ಪಾಟೀಲ ನೆರವೇರಿಸಲಿದ್ದಾರೆ. ಶಾಸಕ ಡಾ. ಚಂದ್ರು ಲಮಾಣಿ, ಸಂಸದ ಬಸವರಾಜ ಬೊಮ್ಮಾಯಿ, ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷ ವಿ.ವಿ. ಕಪ್ಪತ್ತನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ ಮುಂತಾದವರು ಉಪಸ್ಥಿತರಿರುವರು ಎಂದು ಶ್ರೀಮಠದ ಸೇವಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

**'ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ' ಕಾರ್ಯಕ್ರಮದಡಿ ರೈತರ ಸಾಮರ್ಥ್ಯಾಭಿವೃದ್ಧಿ ತರಬೇತಿ**

# ಭಾರತ ಜೈವಿಕ ವೈವಿಧ್ಯದಲ್ಲಿ ಪ್ರಮುಖ ರಾಷ್ಟ್ರ

**■ವಿಜಯಸಾಕ್ಷಿ ಸುದ್ದಿ, ಗದಗ**

ರೈತರು ಸಾಂಪ್ರದಾಯಿಕವಾಗಿ ಬೆಳೆಯುತ್ತಿರುವ ಬೀಜಗಳನ್ನು ವೈಜ್ಞಾನಿಕವಾಗಿ ಸಂರಕ್ಷಿಸುವುದು, ಮೊಳಕೆ ಪರೀಕ್ಷೆ ಮಾಡಿಸುವುದು, ತಳಿಗಳನ್ನು ಸಂರಕ್ಷಿಸಿ ಇತರೆ ಆಸಕ್ತಿಯುತ ರೈತರೊಂದಿಗೆ ಅಭಿವೃದ್ಧಿಗೊಳಿಸುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಚೇತನಾ ಪಾಟೀಲ ಹೇಳಿದರು.

ಕೃಷಿ ಇಲಾಖೆ ಗದಗ ಹಾಗೂ ಐಸಿಎಆರ್ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಹಯೋಗದೊಂದಿಗೆ 'ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ' ಕಾರ್ಯಕ್ರಮದಡಿ ಒಂದು ದಿನದ ರೈತರ ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಾಯಕ ಕೃಷಿ ನಿರ್ದೇಶಕರಾದ ಸೀಮಾ ಸವಣೂರ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಭಾರತವು ಕೃಷಿ ಪರಂಪರೆ ಮತ್ತು ಜೈವಿಕ ವೈವಿಧ್ಯದಲ್ಲಿ ವಿಶ್ವದ ಪ್ರಮುಖ ರಾಷ್ಟ್ರವಾಗಿದ್ದು, ಈ ಪರಂಪರೆಯ ಹೃದಯವಾಗಿರುವುದು ಶತಮಾನಗಳಿಂದ ರೈತರು ಉಳಿಸಿಕೊಂಡು ಬಂದಿರುವ ಪಾರಂಪರಿಕ ಬೀಜಜಾತಿಗಳು. ಇವು ಸ್ಥಳೀಯ ಹವಾಮಾನ, ಮಣ್ಣಿನ ಸ್ವಭಾವ ಮತ್ತು ಸಾಂಸ್ಕೃತಿ ಅಗತ್ಯಗಳಿಗೆ ಹೊಂದಿಕೊಂಡು ಅಭಿವೃದ್ಧಿಯಾಗಿರುವ ಅಮೂಲ್ಯ ಕೃಷಿ ಸಂಪತ್ತುಗಳಾಗಿದ್ದು, ಇವುಗಳನ್ನು ಸಂರಕ್ಷಿಸಿ ಅಭಿವೃದ್ಧಿ ಮಾಡುವುದಕ್ಕಾಗಿ 'ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ' ಕಾರ್ಯಕ್ರಮವನ್ನು ರಾಜ್ಯ ಸರ್ಕಾರವು 2024–25ನೇ ಸಾಲಿನಿಂದ ಐದು ವರ್ಷದವರೆಗೆ ಕೈಗೊಂಡಿದೆ ಎಂದು ತಿಳಿಸಿದರು.



ತಾಂತ್ರಿಕ ಅಧಿವೇಶನದಲ್ಲಿ ಭಾಗವಹಿಸಿದ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥೆ ಡಾ. ಕಲಾವತಿ ಮಾತನಾಡಿ, ಸಾಂಪ್ರದಾಯಿಕ ತಳಿಗಳ ಸಂರಕ್ಷಣೆ ಮಹತ್ವ, ಗುಣಧರ್ಮಗಳು ಹಾಗೂ ಉಪಯೋಗಗಳ ಕುರಿತು ಮಾಹಿತಿ ನೀಡಿದರು.

ಡಾ. ಬಿ.ಎನ್. ಮೊಟಗಿ ದೇಸಿ ತಳಿಗಳ ಸಂರಕ್ಷಣೆ ಹಾಗೂ ಬೀಜೋತ್ಪಾದನೆ ತಾಂತ್ರಿಕತೆಗಳ ಬಗ್ಗೆ ವಿವರವಾಗಿ ಮಾಹಿತಿ ನೀಡಿದರು. ಡಾ. ಸಂಗಶೆಟ್ಟಿ ಕುಸುಬೆ ಬೆಳೆಯ ಬಗ್ಗೆ ಹಾಗೂ ಡಾ. ಬಸವರಾಜ ಏಣಗಿ ಜಿಲ್ಲೆಯ ಪ್ರಮುಖ ದೇಸಿ ಬೆಳೆಗಳಾದ ಹೆಸರು, ಗೋಧಿ ಹಾಗೂ ಜೋಳದ ದೇಸಿ ಬೀಜ ಸಂರಕ್ಷಣೆ ಹಾಗೂ ವೈಜ್ಞಾನಿಕ ಬೇಸಾಯ ಕ್ರಮಗಳ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಿ, ರೈತರ ಸಮಸ್ಯೆಗಳು–ಪರಿಹಾರೋಪಾಯಗಳ ಬಗ್ಗೆ ಚರ್ಚಿಸಿದರು.

ಜಿಲ್ಲೆಯ ಎಲ್ಲ ತಾಲೂಕುಗಳಿಂದ ಮುಖ್ಯ ದೇಸಿ ಬೆಳೆಗಳಾದ ಹುರಪಲು ನವಣೆ, ಹಾಲ ನವಣೆ, ನಂದಿಹಾಳ ಜೋಳ, ಮಾಲದಂಡೆ ಜೋಳ, ದುಂಡು ತೆನೆ ಜೋಳ, ಅಳ್ಳಿನ ಜೋಳ, ಕೆಂಪು ಜೋಳ, ನೆರಳೆ ಬಣ್ಣದ ಗೋಧಿ, ಕೆಂಪು ಗೋಧಿ, ಕಪ್ಪು ಗೋಧಿ, ಜವಾರಿ ತೊಗರಿ, ಜವಾರಿ ಹುರುಳಿ, ಕುಸುಬೆ, ಪುಂಡೆ ಇತ್ಯಾದಿ ದೇಸಿ ಬೀಜಗಳನ್ನು ತೆನೆ, ಹೂ ಇತ್ಯಾದಿಗಳ ಮುಖಾಂತರ ಆಕರ್ಷಿಕವಾಗಿ ಪ್ರದರ್ಶಿಸಲಾಗಿತ್ತು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಭಾಗವಹಿಸಿದ ದೇಸಿ ತಳಿಗಳನ್ನು ಬೆಳೆದು ಸಂರಕ್ಷಿಸಿ ಬೆಳೆಯುತ್ತಿರುವ ಪ್ರಗತಿಪರ ರೈತರಾದ ಮೃತ್ಯುಂಜಯ ವಸ್ತ್ರದ, ವೀರೇಶ ನೆಗಲಿ, ಉಮೇಶಗೌಡ ಪಾಟೀಲ, ಅಂದಪ್ಪ ಅಂಗಡಿ ಹಾಗೂ ಮಲ್ಲಯ್ಯ ಗುರುಬಸಪ್ಪನವರಮಠ ಇವರು ತಮ್ಮ ಅನುಭವಗಳನ್ನು ಹಂಚಿಕೊಂಡರು.

ನೇತ್ರಾವತಿ ಪಟ್ಟೇದ ನಿರೂಪಿಸಿದರು. ತರಬೇತಿಯಲ್ಲಿ ಆತ್ಮ ಹಾಗೂ ಎನ್‌ಎಫ್‌ಎಸ್‌ಎಮ್ ಯೋಜನೆಯ ಸಿಬ್ಬಂದಿಗಳು ಹಾಜರಿದ್ದರು. ಮಂಜುನಾಥ ಭರಮಗೌಡರ ವಂದಿಸಿದರು.

> ಉಪ ಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿಎಸ್ ಮಾತನಾಡುತ್ತಾ, ಪ್ರಸಕ್ತ ವರ್ಷದಲ್ಲಿ ಜಿಲ್ಲೆಯಿಂದ 38 ಜನ ದೇಸಿ ತಳಿಗಳನ್ನು ಬೆಳೆಯುವ ರೈತರನ್ನು ಗುರುತಿಸಿ ಸದರಿ ರೈತ–ರಿಂದ 52 ದೇಸಿ ತಳಿಗಳನ್ನು ಮೂಲ ಸಮೀಕ್ಷೆಯ ಮೂಲಕ ಸಂಗ್ರಹಿಸಿ, ಜೀನ್ ಬ್ಯಾಂಕ್‌ಗೆ ಸಂರಕ್ಷಿಸಿ, ಅಭಿವೃದ್ಧಿಪಡಿಸಲು ಕಳುಹಿಸಲಾಗಿದೆ ಎಂದು ತಿಳಿಸಿದರು.

**ಕೆಜಿಎಂಎಸ್ ಶಾಲೆಯ ವಾರ್ಷಿಕೋತ್ಸವದಲ್ಲಿ ನಿವೃತ್ತ ದೈಹಿಕ ಶಿಕ್ಷಕ ಬಿ.ವಿ. ಗೌಡರ**

# ಸರಕಾರಿ ಶಾಲೆಯೆಂದರೆ ಮೂಗು ಮುರಿಯಬೇಡಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರಕಾರಿ ಶಾಲೆಗಳೆಂದರೆ ಮೂಗು ಮುರಿಯಬೇಡಿ. ಇಲ್ಲಿಯೂ ತರಬೇತಿ ಪಡೆದ, ಉನ್ನತ ಅಧ್ಯಯನ ಮಾಡಿದ, ಕೌಶಲ್ಯ ಸಾಧಿಸಿದ ಶಿಕ್ಷಕರಿದ್ದಾರೆ. ನಾಡಿನ ದೊಡ್ಡ ವ್ಯಕ್ತಿಗಳೆಲ್ಲ ಸರಕಾರಿ ಶಾಲೆಗಳಲ್ಲಿಯೆ ಕಲಿತವರು ಎಂಬುದನ್ನು ತಿಳಿದು ಮಕ್ಕಳನ್ನು ಸರಕಾರಿ ಶಾಲೆಗೆ ದಾಖಲಿಸಿ ಎಂದು ನಿವೃತ್ತ ದೈಹಿಕ ಶಿಕ್ಷಕ ಬಿ.ವಿ. ಗೌಡರ ಹೇಳಿದರು.

ಪಟ್ಟಣದ ಕೆಜಿಎಂಎಸ್ ಶಾಲೆಯ ವಾರ್ಷಿಕೋತ್ಸವದಲ್ಲಿ ಅವರು ಮಾತನಾಡಿದರು.

ನನ್ನ ಮೊದಲ ಸೇವಾವಧಿ ಪ್ರಾರಂಭವಾಗಿದ್ದು ಇದೇ ನರೇಗಲ್ಲದ ಎಂಸಿಎಸ್ ಶಾಲೆಯಲ್ಲಿ. 13 ವರ್ಷಗಳ ಇಲ್ಲಿನ ಸೇವೆ ನನ್ನ ಮುಂದಿನ ಸೇವಾವಧಿಗೆ ಸಾಕಷ್ಟು ಅನುಭವ ನೀಡಿತು, ನಾನು ನರೇಗಲ್ಲ ಮತ್ತು ಹದಲಿ ಶಾಲೆಯ ಮಕ್ಕಳನ್ನು ರಾಜ್ಯ, ರಾಷ್ಟ್ರಮಟ್ಟದ ಕ್ರೀಡೆಗಳಿಗೆ ಕರೆದೊಯ್ಯಲು ಸಾಧ್ಯವಾಯಿತು ಎಂದರು.

ಕರವೇ ಜಿಲ್ಲಾಧ್ಯಕ್ಷ ಹನುಮಂತ ಅಬ್ಬಿಗೇರಿ ಮಾತನಾಡಿ, ಈ ಶಾಲೆಯಲ್ಲಿ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಮತ್ತು ಸಂಸ್ಕಾರ ಸಿಗುತ್ತದೆ. ನಿಮ್ಮ ಮಕ್ಕಳನ್ನು ಈ ಶಾಲೆಗೆ ಸೇರಿಸಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅನುಕೂಲ ಮಾಡಿಕೊಡಿ ಎಂದರು.

> ಸ್ವಗ್ರಾಮ ಫೆಲೋಶಿಪ್‌ನ ಚನ್ನಬಸಪ್ಪ ಕುಷ್ಟಗಿ ಮಾತನಾಡಿ, ಇಲ್ಲಿನ ಕಾರ್ಯ ಚಟುವಟಿಕೆಗಳನ್ನು ಕಂಡು ಸ್ವಗ್ರಾಮ ಫೆಲೋಶಿಪ್‌ನವರು ಶಾಲೆಗೆ ಲಕ್ಷಾಂತರ ರೂಪಾಯಿಗಳ ಪಾಠೋಪಕರಣ ಮತ್ತು ಪೀಠೋಪಕರಣಗಳ ದೇಣಿಗೆ ನೀಡಿದ್ದಾರೆ. ಇದನ್ನು ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದರು.

ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಸವಿತಕ್ಕ ಮಾತನಾಡಿ, ಚಿಕ್ಕಂದಿನಲ್ಲಿ ಮಕ್ಕಳಿಗೆ ಸಾಧ್ಯವಿದ್ದಷ್ಟು ಆಧ್ಯಾತ್ಮದ, ನೈತಿಕ ಶಿಕ್ಷಣದ ಅನುಭವ ನೀಡಲು ಪ್ರಯತ್ನಿಸಿ. ನಮ್ಮ ಕೇಂದ್ರದಿಂದ ನಾವು ಇಲ್ಲಿಯ ಮಕ್ಕಳಿಗೆ ಮೌಲ್ಯ ಶಿಕ್ಷಣ ನೀಡಲು ಬಂದಾಗಲೆಲ್ಲ ಇಲ್ಲಿನ ಸಿಬ್ಬಂದಿಯವರ ಸಹಕಾರ ಅಮೋಘವಾಗಿದೆ. ಅದಕ್ಕಾಗಿ ಅವರಿಗೆಲ್ಲ ಕೃತಜ್ಞತೆಗಳು ಎಂದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ನಿಮ್ಮ ಮಕ್ಕಳಲ್ಲಿ ಸಂಸ್ಕಾರಗಳನ್ನು ಬೆಳೆಸಿರಿ. ಸಂಸ್ಕಾರಯುತ ಮಕ್ಕಳು ದೇಶದ ಆಸ್ತಿಯಾಗಿದ್ದಾರೆ. ನೀವು ಓದುವುದನ್ನು ರೂಢಿಸಿಕೊಂಡರೆ ನಿಮ್ಮ ಮಕ್ಕಳು ನಿಮ್ಮನ್ನು ಅನುಸರಿಸಿ ಓದನ್ನು ರೂಢಿಸಿಕೊಳ್ಳುತ್ತಾರೆ. ಈ ಶಾಲೆಯ ಕ್ರಿಯಾಶೀಲ ಚಟುವಟಿಕೆಗಳು ಸಾರ್ವಜನಿಕರಿಂದ ಮೆಚ್ಚುಗೆ ಪಡೆದಿವೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ತಿಮ್ಮಣ್ಣ ಬಂಡಿವಡ್ಡರ, ಎಸ್‌ಡಿಎಂಸಿ ಸಮಿತಿಯ ಸದಸ್ಯರಿದ್ದರು. ಮುಖ್ಯಶಿಕ್ಷಕ ಎಂ.ಎಲ್. ಹೊಸಳ್ಳಿ ಸ್ವಾಗತಿಸಿದರು. ಶಿಕ್ಷಕ ಬಸವರಾಜ ಕುರಿ ವರದಿ ವಾಚಿಸಿದರು. ಶಿಕ್ಷಕಿ ಚವ್ಹಾಣ ನಿರೂಪಿಸಿದರು. ಶಿಕ್ಷಕ ಡಿ.ವಿ. ಕಳ್ಳಿ ವಂದಿಸಿದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ದೊಡ್ಡೂರ ಗ್ರಾ.ಪಂ ವ್ಯಾಪ್ತಿಯಲ್ಲಿ ಜಿಲ್ಲಾಸ್ಪತ್ರೆ ಗದಗ, ಸ್ಮೈಲ್ ಫೌಂಡೇಶನ್ ಗದಗ, ಅಂಬಿಕಾ ಬ್ಲಡ್ ಬ್ಯಾಂಕ್ ಗದಗ ಹಾಗೂ ದೊಡ್ಡೂರ ಗ್ರಾ.ಪಂ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ರಿಯಾಜ ಖತೀಬ್ ಮಾತನಾಡಿ, ಆರೋಗ್ಯ ಪ್ರತಿಯೊಬ್ಬರಿಗೂ ಅವಶ್ಯ, ಇಂದಿನ ಆಧುನಿಕ ದಿನಮಾನದಲ್ಲಿ ಯಾರೂ ಆರೋಗ್ಯದ ಬಗ್ಗೆ ಕಾಳಜಿ ತಗೆದುಕೊಳ್ಳುತ್ತಿಲ್ಲ.

ಆದಷ್ಟು ಒತ್ತಡ ರಹಿತ ಬದುಕನ್ನು ಕಟ್ಟಿಕೊಳ್ಳಲು ಎಲ್ಲರೂ ಕಾಳಜಿ ವಹಿಸಿ ಎಂದರು.

ಶಿಬಿರದಲ್ಲಿ ಚಿಕ್ಕ ಮಕ್ಕಳ ತಜ್ಞರಾದ ಡಾ. ವೆಂಕಟೇಶ್ ರಾಠೋಡ, ಸ್ತ್ರೀರೋಗ ತಜ್ಞರಾದ ಡಾ. ಸುನಿತಾ, ಹೃದಯರೋಗ ಹಾಗೂ ಮಧುಮೇಹ ತಜ್ಞರಾದ ಡಾ. ಸುನೀಲ್ ಹಬೀಬ, ಡಾ. ರವಿ ಕಡಗಾವಿ ಅವರು ಭಾಗವಹಿಸಿ ಗ್ರಾಮಸ್ಥರಿಗೆ ಉಚಿತ ವೈದ್ಯಕೀಯ ತಪಾಸಣೆ, ಸಲಹೆಗಳನ್ನು ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಮಾಜಿ ಸದಸ್ಯರಾದ ಕೃಷ್ಣಾ ಲಮಾಣಿ, ನಾನಪ್ಪ ಲಮಾಣಿ, ಶಂಕ್ರಣ್ಣ ಲಮಾಣಿ, ನಿಂಗಪ್ಪ ಬಂಕಾಪೂರ, ಫಕ್ಕೀರಗೌಡ್ರ ಭರಮಗೌಡ್ರ ಉಪಸ್ಥಿತರಿದ್ದರು. ರಾಮಯ್ಯ ಗುರವಿನರವರ ಕಾರ್ಯಕ್ರಮ ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ಊರಿನ ಹಿರಿಯರಾದ ಎನ್.ಎಚ್. ಹಡಪದ, ಗುಡ್ಡಪ್ಪ ಹಡಪದ, ಅಮರಪ್ಪ ಗುಡಗುಂಟಿ, ರವಿ ಭಜಕ್ಕನವರ ಮುಂತಾದವರಿದ್ದರು.

# ನಂದಿಪುರ ಕ್ಷೇತ್ರದಲ್ಲಿ ನುಗ್ಗೆ ಕೃಷಿ ಕಾರ್ಯಾಗಾರ: ಸಾವಯವ ಪದ್ಧತಿಗೆ ಒತ್ತು

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ನಂದಿಪುರ ಶ್ರೀ ಗುರು ದೊಡ್ಡ ಬಸವೇಶ್ವರ ಮಠದಲ್ಲಿ ಶ್ರೀ ಕ್ಷೇತ್ರದ ವತಿಯಿಂದ ಹಮ್ಮಿಕೊಂಡಿದ್ದ 'ನುಗ್ಗೆ ಕೃಷಿ ಮತ್ತು ನುಗ್ಗೆ ಬೆಳೆಗಾರರ ಸಬಲೀಕರಣ' ಒಂದು ದಿನದ ಕಾರ್ಯಾಗಾರದಲ್ಲಿ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಹೆಚ್ಚಿನ ಒತ್ತು ನೀಡಲಾಯಿತು.

ಪ್ರಗತಿಪರ ನುಗ್ಗೆ ಕೃಷಿಕ ಬ್ಯಾಲಿಹಾಳ್ ಬಸಯ್ಯ ಹಿರೇಮಠ ಮಾತನಾಡಿ, ನುಗ್ಗೆ ಕೃಷಿಯಲ್ಲಿ ನೈಸರ್ಗಿಕ ಹಾಗೂ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ರೈತರಿಗೆ ಸಲಹೆ ನೀಡಿದರು. ನುಗ್ಗೆ ಎಲೆ ಸಂಗ್ರಹ, ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರಾಟದ ಪ್ರತಿಯೊಂದು ಹಂತದಲ್ಲೂ ಶುದ್ಧತೆ ಮತ್ತು ಗುಣಮಟ್ಟ ಕಾಪಾಡಿಕೊಳ್ಳುವುದು ಯಶಸ್ಸಿನ ಮೂಲ ಎಂದರು.

ನುಗ್ಗೆ ಬೆಳೆ ರೈತರಿಗೆ ವರದಾನವಾಗಿದ್ದು, ಎಲ್ಲಾ ವಿಧದ ಮಣ್ಣಿನಲ್ಲಿ ಸುಲಭವಾಗಿ ಬೆಳೆಯುತ್ತದೆ. ನುಗ್ಗೆ ಸೊಪ್ಪನ್ನು ಒಣಗಿಸಿ ವಿವಿಧ ಉತ್ಪನ್ನಗಳನ್ನು ತಯಾರಿಸಬಹುದು. ಬೀಜದಿಂದ ಎಣ್ಣೆ ಉತ್ಪಾದನೆ ಸಾಧ್ಯವಿದ್ದು, ಆಹಾರ ಮತ್ತು ಔಷಧೀಯ ಬಳಕೆ ಹೆಚ್ಚುತ್ತಿದೆ. ಸಾವಯವ ಪ್ರಮಾಣಪತ್ರ ಹೊಂದಿದ ಮೌಲ್ಯವರ್ಧಿತ ಉತ್ಪನ್ನಗಳಿಗೆ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಬೇಡಿಕೆ ಇದೆ. ಪ್ರಸ್ತುತ 300 ರಿಂದ 500 ಮೆಟ್ರಿಕ್ ಟನ್ ನುಗ್ಗೆ ಸೊಪ್ಪಿಗೆ ಬೇಡಿಕೆ ಇದ್ದರೂ ಪೂರೈಕೆ ಕೊರತೆ ಇದೆ ಎಂದು ಅವರು ತಿಳಿಸಿದರು.


ಕೃಷಿ ವಿಜ್ಞಾನಿ ಮಹಾಂತೇಶ್ ಪಾಟೀಲ್ ಯೋಜನಾಬದ್ಧ ಕೃಷಿಗೆ ಕರೆ ನೀಡಿದರು. ಪ್ರಯೋಗ ಮತ್ತು ಸಂಶೋಧನೆಗಳಿಗೆ ತೆರೆದ ಮನಸ್ಸು ಇರಬೇಕು. ಸಾವಯವ ಕೃಷಿ ಬೆಳೆಗಷ್ಟೇ ಸೀಮಿತವಾಗದೆ, ರೈತನ ಜೀವನಶೈಲಿಯ ಭಾಗವಾಗಬೇಕು ಎಂದರು. ಪ್ರಗತಿಪರ ಕೃಷಿಕ ವಿಶ್ವೇಶ್ವರ ಸಜ್ಜನ್, ನುಗ್ಗೆ ಬೇರಿನಿಂದ ಎಲೆಯವರೆಗೆ ಔಷಧೀಯ ಗುಣಗಳಿದ್ದು, ಮೌಲ್ಯವರ್ಧನೆ ಹಾಗೂ ಮಾರುಕಟ್ಟೆ ತಂತ್ರಗಳನ್ನು ರೈತರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಪರಮಪೂಜ್ಯ ಡಾ. ಮಹೇಶ್ವರ ಸ್ವಾಮೀಜಿಗಳು ಮಾತನಾಡಿ, ನುಗ್ಗೆಕಾಯಿ ಮಾರಾಟದ ಮೇಲೆ ಮಾತ್ರ ಆದಾಯ ನಿರೀಕ್ಷಿಸಿದರೆ ನಷ್ಟ ಸಂಭವಿಸಬಹುದು. ಎಲೆಯನ್ನು ಒಣಗಿಸಿ ಅಥವಾ ಮೌಲ್ಯವರ್ಧನೆ ಮಾಡಿ ಮಾರಾಟ ಮಾಡಿದರೆ ಲಾಭದಾಯಕ ಕೃಷಿ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬಿ.ಎಂ ಈರಪ್ಪಯ್ಯ, ಡಾ. ಚಿಕ್ಕಣ್ಣ, ಎಂ. ಶಿವಮೂರ್ತಿ, ವಿಷ್ಣು, ನಿಯಾಜಿ, ಶಿವಜ್ಞ ಬಿದರಕೇರಿ, ವಸಂತ ಮಾಳ್ವಿ, ಒಪ್ಪತ್ತೇಶ್ವರರ, ನಾಗೇನಹಳ್ಳಿ ಶ್ರೀನಿವಾಸ್, ಅಪ್ಪೇನಹಳ್ಳಿ ಶಿವಣ್ಣ, ಹೆಚ್.ಎಸ್. ಕಣ್ಣರ್, ಓಬಳೇಶ್, ಡಾ. ಕೊಟ್ರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸ್ವರೂಪ್ ಕೊಟ್ಟೂರು ಮತ್ತು ಹೆಚ್.ಎಂ. ಕೊಟ್ರದೇವರು ಕಾರ್ಯಕ್ರಮ ನಿರ್ವಹಿಸಿದರು.



# ಶ್ರೀ ಗುರು ರಾಘವೇಂದ್ರ ಸ್ವಾಮಿಗಳ 431ನೇ ವರ್ಧಂತಿ ಮಹೋತ್ಸವ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕಲಿಯುಗದ ಕಾಮಧೇನು, ಕಲ್ಪವೃಕ್ಷವೆಂದು ಭಕ್ತರಿಂದ ಆರಾಧಿಸಲ್ಪಡುವ ಶ್ರೀ ಗುರು ರಾಘವೇಂದ್ರ ಸ್ವಾಮಿಗಳು ಅವರ 431ನೇ ವರ್ಧಂತಿ ಮಹೋತ್ಸವವು ಪಟ್ಟಣದ ರಾಯರ ಮಠದಲ್ಲಿ ಭಕ್ತಿಭಾವದಿಂದ ಹಾಗೂ ಅದ್ದೂರಿಯಾಗಿ ಆಚರಿಸಲಾಯಿತು.

ವರ್ಧಂತಿ ಅಂಗವಾಗಿ ಬೆಳಿಗ್ಗೆಯಿಂದಲೇ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಿತು. ಬದ್ರಿನಾಥ್ ಆಚಾರ್ಯ ಹಾಗೂ ಸುಬ್ರಮಣ್ಯ ಆಚಾರ್ಯರ ನೇತೃತ್ವದಲ್ಲಿ ಸಕಲ ವಿಧಿವಿಧಾನಗಳು ನೆರವೇರಿಸಲಾಯಿತು. ಅಷ್ಟಾಕ್ಷರ ಜಪ ಪಾರಾಯಣ, ಫಲಪುಷ್ಪ ಅಭಿಷೇಕ, ಪಂಚಾಮೃತ ಅಭಿಷೇಕ, ಕನಕಾಭಿಷೇಕ ಸೇರಿದಂತೆ ವಿವಿಧ ಸೇವೆಗಳು ನಡೆದವು. ನೂರಾರು ಭಕ್ತರು ಭಾಗವಹಿಸಿ ರಾಯರ ಆಶೀರ್ವಾದ ಪಡೆದರು.

ಭಜನಾ ಮಂಡಳಿಯಿಂದ ಭಜನೆ, ಪಲ್ಲಕ್ಕಿ ಉತ್ಸವ ಹಾಗೂ ದೀಪಾರಾಧನೆ ನಡೆಯಿತು. ಮಧ್ಯಾಹ್ನ ತೀರ್ಥ, ಫಲ, ಮಂತ್ರಾಕ್ಷತೆ ಮತ್ತು ಪ್ರಸಾದ ವಿತರಿಸಲಾಯಿತು. ಸಂಜೆ ಮಹಾಮಂಗಳಾರತಿ, ಸ್ವಸ್ತಿವಾಚನ ಹಾಗೂ ವೀಣಾಭಜನೆ ಕಾರ್ಯಕ್ರಮಗಳು ಭಕ್ತರ ಮನಸೆಳೆಯುವಂತಾಗಿದ್ದವು.

ಟ್ರಸ್ಟ್ ಅಧ್ಯಕ್ಷ ಮಂಜುನಾಥ್ ಶೆಟ್ಟಿ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ನಿಂಯಮಾನುಸಾರವಾಗಿ ಮಹೋತ್ಸವವನ್ನು ಆಯೋಜಿಸಲಾಗಿದ್ದು, ಭಕ್ತರ ಸಹಕಾರದಿಂದ ಯಶಸ್ವಿಯಾಗಿ ನೆರವೇರಿದೆಯೆಂದು ತಿಳಿಸಿದರು.

ಪುರಸಭೆ ಅಧ್ಯಕ್ಷ ಮರಿ ರಾಮಪ್ಪ ಮಾತನಾಡಿ, ಸಂಕಷ್ಟಗಳ ಸಂದರ್ಭದಲ್ಲಿಯೂ ರಾಯರು ಭಕ್ತರಿಗೆ ಆಶ್ರಯವಾಗಿದ್ದಾರೆ ಎಂಬುದು ಭಕ್ತರ ನಂಬಿಕೆಯಾಗಿದೆ. ರಾಯರ ಸೇವೆ ಮಾಡುವುದು ಪುಣ್ಯಕಾರ್ಯವೆಂದರು.

ರಾಯರ ವೀಣಾ ಭಜನಾ ಮಂಡಳಿ ಅಧ್ಯಕ್ಷೆ ಎಂ.ಎಂ. ಸಾವಿತ್ರಿ ಮಾತನಾಡಿ, ಅನ್ನದಾನ ಸೇರಿದಂತೆ ವಿವಿಧ ಧಾರ್ಮಿಕ ಸೇವೆಗಳು ದಿನವಿಡೀ ನಡೆಯಿತು. ಭಕ್ತರು ಭಕ್ತಿಪೂರ್ವಕವಾಗಿ ಪಾಲ್ಗೊಂಡರು ಎಂದು ಹೇಳಿದರು.


# ರೈತ ಸಂಘದ ವಿಜಯನಗರ ಜಿಲ್ಲಾ ಪದಾಧಿಕಾರಿಗಳ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷರಾದ ಬಡಗಲಪುರ ನಾಗೇಂದ್ರ, ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್, ರಾಜ್ಯ ಕಾರ್ಯಾಧ್ಯಕ್ಷರಾದ ಜೆ.ಎಂ. ವೀರಸಂಗಯ್ಯ, ರಾಜ್ಯ ಮಹಿಳಾ ಘಟಕದ ಅಧ್ಯಕ್ಷರಾದ ನಾಗರತ್ನಮ್ಮ ವಿ. ಪಾಟೀಲ್, ಕಲ್ಯಾಣ ಕರ್ನಾಟಕ ವಿಭಾಗೀಯ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ್ ಸತ್ಯಪೇಟೆ, ವಿಭಾಗೀಯ ಕಾರ್ಯದರ್ಶಿ ಎಂ.ಎಲ್.ಕೆ. ನಾಯ್ಡು ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ. ಗೋಣಿಬಸಪ್ಪ ಅವರ ನೇತೃತ್ವದಲ್ಲಿ ವಿಜಯನಗರ ಜಿಲ್ಲಾ ಸಮಿತಿಯ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ಜಿಲ್ಲಾ ಸಮಿತಿ ಪದಾಧಿಕಾರಿಗಳು ಸಲಹಾ ಸಮಿತಿಗೆ ಹುರುಕಡ್ಲಿ ಶಿವಕುಮಾರ್, ಬಿ. ಸಿದ್ದನಗೌಡ, ಗೌರವಾಧ್ಯಕ್ಷರಾಗಿ ಬಾಣದ ಶಿವಪ್ಪ (ಹಗರಿಬೊಮ್ಮನಹಳ್ಳಿ), ಜಿಲ್ಲಾಧ್ಯಕ್ಷರಾಗಿ ಎ. ಆಂಜನೇಯಲು (ಹಗರಿಬೊಮ್ಮನಹಳ್ಳಿ), ಕಾರ್ಯಾಧ್ಯಕ್ಷರಾಗಿ ಎಸ್. ಬಾಷಾ (ಕೂಡ್ಲಿಗಿ),ಪ್ರಧಾನ ಕಾರ್ಯದರ್ಶಿಯಾಗಿ ಗಂಟೆ ಸೋಮಶೇಖರ್ (ಹೊಸಪೇಟೆ), ಉಪಾಧ್ಯಕ್ಷರಾಗಿ ಸುರೇಶ್ ಕುಮಾರ್ (ಕೊಟ್ಟೂರು), ಕೆ. ಮಂಜುನಾಥ (ಹಡಗಲಿ), ಗನಿ ಸಾಬ್ (ಹಡಗಲಿ), ಪಾಂಡುರಂಗ ನಾಯಕ (ಕೂಡ್ಲಿಗಿ), ಸಂಘಟನಾ ಕಾರ್ಯದರ್ಶಿಗಳಾಗಿ ಗುಡಿಯಾರ್ ಮಲ್ಲಿಕಾರ್ಜುನ್ (ಕೊಟ್ಟೂರು). ಕಾರ್ಯದರ್ಶಿ: ಬಾಣದ ಕೃಷ್ಣ (ಕೂಡ್ಲಿಗಿ) ಆಯ್ಕೆಯಾದರೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾಗಿ ವಿಜಯಲಕ್ಷ್ಮಿ ಡಿ.ಹೆಚ್.ಎಮ್ (ಹಡಗಲಿ), ಉಪಾಧ್ಯಕ್ಷರಾಗಿ ಮೀನಾಕ್ಷಿ ಬಿ (ಮರಿಯಮ್ಮನಹಳ್ಳಿ), ಲಕ್ಷ್ಮೀದೇವಿ (ಕೂಡ್ಲಿಗಿ),ಕಾರ್ಯದರ್ಶಿಯಾಗಿ ಭೋವಿ (ಹಗರಿಬೊಮ್ಮನಹಳ್ಳಿ) ಹಾಗೂ ಯುವ ಘಟಕಕ್ಕೆ ಜಿಲ್ಲಾಧ್ಯಕ್ಷರಾಗಿ ರವಿಕುಮಾರ್ (ತಂಬ್ರಹಳ್ಳಿ),ಉಪಾಧ್ಯಕ್ಷರಾಗಿ ಕೆ. ಯಮನೂರು (ಮರಿಯಮ್ಮನಹಳ್ಳಿ), ದುರುಗಪ್ಪ (ಹಡಗಲಿ)

ಪ್ರಧಾನ ಕಾರ್ಯದರ್ಶಿಯಾಗಿ ಸಂಜೀವ್ (ಹಗರಿಬೊಮ್ಮನಹಳ್ಳಿ). ಇದೇ ವೇಳೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಇತರ ಪದಾಧಿಕಾರಿಗಳನ್ನೂ ಆಯ್ಕೆ ಮಾಡಲಾಗಿದೆ ಎಂದು ಸಂಘದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



# ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಮಾ. 1ರಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವವನ್ನು ಮಾರ್ಚ್ 1ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಡಾ. ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಇದಲ್ಲದೆ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ. ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಡಾ. ಜಯಶ್ರೀ ಮಲ್ಲಿಕಾರ್ಜುನ ಹೊಸಮನಿ ಅವರು ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರಗೇಶ್ ಕೆ.ಆರ್. ಮತ್ತು ಕನ್ನಡ ಹಾಗೂ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವ್ಹಿ. ಬಳ್ಳಾರಿ ಸಾರ್ವಜನಿಕರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನಿಸಿದ್ದಾರೆ.

## ಕಸಾಪ ವತಿಯಿಂದ ಡಾ. ತೋಂಟದ ಸಿದ್ಧಲಿಂಗಶ್ರೀ ಸ್ಮರಣಾರ್ಥ ದತ್ತಿ ಉಪನ್ಯಾಸ

# ಸಮಾಜೋನ್ನತಿಗೆ ತೋಂಟದ ಶ್ರೀಗಳ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಬೇರೂರಿರುವ ಅಸಮಾನತೆಯ ಆಚರಣೆಗಳನ್ನು ತೊಡೆದು ಹಾಕಿ ಸಮ ಸಮಾಜ ನಿರ್ಮಾಣದ ಹಿನ್ನೆಲೆಯಲ್ಲಿ ಬಸವಾದಿ ಶರಣರ ವಿಚಾರಗಳಿಗೆ ಪೂರಕವಾಗಿ ಬದುಕಿದವರು ತೋಂಟದ ಸಿದ್ಧಲಿಂಗ ಶ್ರೀಗಳು. ಭಾಷಾ ಪ್ರೀತಿ ಪರಿಸರ ಕಾಳಜಿ, ಪುಸ್ತಕ ಪ್ರೀತಿ ಅದ್ವಿತೀಯವಾದುದು. ಸಮಾಜದ ಉನ್ನತಿಗೆ ಸದಾ ಶ್ರಮಿಸಿದ ಸ್ವಾಮಿಗಳು ಜನಸಾಮಾನ್ಯರ ಸಂಕಟಗಳಿಗೆ ದನಿಯಾದರು ಎಂದು ಡಾ. ತೋಂಟದ ಸಿದ್ಧರಾಮಸ್ವಾಮಿಗಳು ನುಡಿದರು.




ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಡಾ. ತೋಂಟದ ಸಿದ್ಧಲಿಂಗಶ್ರೀಗಳ ಸ್ಮರಣಾರ್ಥ ಜರುಗಿದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ದೂರದೃಷ್ಟಿ ಹೊಂದಿದ್ದ ಶ್ರೀಗಳು ಮುಂಬರುವ ಸಮಸ್ಯೆಗಳನ್ನು ಅರಿತು ಸ್ಪಂದಿಸುವ ಮೂಲಕ ಜನಸಾಮಾನ್ಯರ ಸ್ವಾಮಿಗಳಾಗಿ ಬದುಕಿದರು. ನಾಡಿನ ಸ್ವಾಮಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದರು ಎಂದು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪೂಜ್ಯರು ಸೂಕ್ಷ್ಮಮತಿಗಳಾಗಿದ್ದು, ಸಮಾಜಕ್ಕೆ ಒದಗಬಹುದಾದ ಆಪತ್ತುಗಳನ್ನು ಮುಂಚಿತವಾಗಿಯೇ ಗ್ರಹಿಸಿ ಅವುಗಳಿಗೆ ಈಗಿನಿಂದಲೇ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗುತ್ತಿದ್ದರು. ಪ್ರತಿ ವ್ಯಕ್ತಿಯಲ್ಲಿರುವ ಉತ್ತಮ ಗುಣಗಳನ್ನು ಗುರುತಿಸಿ ಪ್ರೋತ್ಸಾಹಿಸುತ್ತಿದ್ದರು. ಬಂದ ಭಕ್ತರಿಗೆ ಪುಸ್ತಕಗಳನ್ನು ಕಾಣಿಕೆಯಾಗಿ ನೀಡಿ ಓದುವ ಸಂಸ್ಕೃತಿಯನ್ನು ಬೆಳೆಸುವ ಮಹತ್ವದ ಕಾರ್ಯವನ್ನು ಮಾಡಿದರು. ಭಕ್ತರು ನೀಡಿದ ಹಣವನ್ನು ಪುಸ್ತಕ ಪ್ರಕಟನೆಗೆ ಬಳಸಿ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸುವ ಕಾರ್ಯವನ್ನು ಮಾಡಿದರೆಂದು ತಿಳಿಸಿದರು.

ವೇದಿಕೆ ಮೇಲೆ ದತ್ತಿದಾನಿಗಳಾದ ಸುರೇಖಾ ಸದಾನಂದ ಪಿಳ್ಳಿ, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ಚಿಲ್ಲಾಳೇಶ್ವರ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಂದ ಸಮೂಹ ವಚನ ಗಾಯನ ಜರುಗಿತು. ಈರಣ್ಣ ಮಣಕವಾಡ ಇವರಿಂದ ವಚನ ಗಾಯನ ಜರುಗಿತು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಜಿ.ಬಿ. ಪಾಟೀಲ, ಅನ್ನದಾನಿ ಹಿರೇಮಠ, ಸಿ.ಕೆ.ಎಚ್. ಶಾಸ್ತ್ರಿ(ಕಡಣಿ), ಯಲ್ಲಪ್ಪ ಹಂದ್ರಾಳ, ಮಂಜುಳಾ ವೆಂಕಟೇಶಯ್ಯ, ಸತೀಶಕುಮಾರ ಚನ್ನಪ್ಪಗೌಡರ, ಅಮರೇಶ ರಾಂಪುರ, ಗುರುಪಾದ ಕಟ್ಟಿಮನಿ, ಉಮಾ ಕಣವಿ, ಅಕ್ಕಮ್ಮ ಪಾರ್ವತಿಮಠ, ಬಿ.ಬಿ. ಹೊಳಗುಂದಿ, ಕೆ.ಎಸ್. ಜಯದೇವ ಭಟ್, ಎಂ.ಎಫ್. ಡೋಣಿ, ಕಲ್ಲೇಶ ಮೂರಶಿಳ್ಳಿನ, ಮಂಜುನಾಥ ಹದ್ಲಿ, ಶಾಮನಗೌಡ ಅಳಗುಂಡಿ, ಸಿ.ಎಂ. ಮಾರನಬಸರಿ, ದಿಲೀಪಕುಮಾರ ಮುಗಳಿ, ಬಾಲಚಂದ್ರ ಕೋಟಿ, ಶೇಖಣ್ಣ ಕಳಸಾಪೂರ, ರತ್ನಕ್ಕ ಪಾಟೀಲ, ಇಂದುಮತಿ ಪೋತದಾರ, ತೇಜಸ್ವಿನಿ ತೋಟದ, ಅಣ್ಣಪ್ಪ ಹರ್ಲಾಪೂರ, ಭಾರತಿ ಗುಂಜಾಳ, ಶೈಲಜಾ ಗಿಡ್ನಂದಿ, ಲಕ್ಷ್ಮಿ ಹರ್ಲಾಪೂರ, ಭಾಗ್ಯಶ್ರೀ ಹರ್ಲಾಪೂರ, ಸುಧಾ ಬಳ್ಳಿ, ಸಂಗೀತಾ ಪೊಲೀಸ್‌ಪಾಟೀಲ, ಕಾವ್ಯ ಹಳ್ಳಿಕೇರಿ, ಪುಷ್ಪಾ ಶಿರಹಟ್ಟಿ, ಸಾವಿತ್ರಿ ಚನ್ನದಾಸರ, ಮಲ್ಲಿಕಾರ್ಜುನ ನಿಂಗೋಜಿ, ರಾಚಪ್ಪ ಮಿಣಜಗಿ, ಶಿವಕುಮಾರ ಬೇವಿನಮರದ, ಶರಣಪ್ಪ ಹೊಸಂಗಡಿ, ಈಶ್ವರಪ್ಪ ಕುಬಸದ, ಬಿ.ಬಿ. ಪಾಟೀಲ ಎಚ್.ಡಿ. ಕುರಿ, ಡಿ.ಜಿ. ಕುಲಕರ್ಣಿ, ಎ.ಎಸ್. ಪಾಟೀಲ, ಎಂ.ಕೆ. ಲಮಾಣಿ, ಅನಸೂಯಾ ಮಿಟ್ಟಿ, ನೀಲಮ್ಮ ಅಂಗಡಿ, ಗುರುಪಾದ ಕಟ್ಟಿಮನಿ, ಸುಹಾಸ ಪಿಳ್ಳಿ, ಎಂ.ಐ. ಕುಬುಸದ, ರಾಜೇಂದ್ರ ಗಡಾದ, ರತ್ನಾ ಪುರಂತರ, ಆರ್.ಎಸ್. ಘಾರ್ಗಿ, ರಾಚಪ್ಪ ನಾರಾಯಣಪೂರ, ಎಂ.ಸಿ. ವಗ್ಗಿ, ಅರುಣ ರಾಜಪುರೋಹಿತ, ರವೀಂದ್ರ ಜೋಶಿ ಮೊದಲಾದವರು ಉಪಸ್ಥಿತರಿದ್ದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗೇರ ಉಪನ್ಯಾಸ ನೀಡಿ, ಲಿಂಗಾಯತ ಅಧ್ಯಯನ ಸಂಸ್ಥೆಯ ಮೂಲಕ 600ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿ ಮಠವನ್ನು ಜ್ಞಾನ ದಾಸೋಹದ ಕೇಂದ್ರವನ್ನಾಗಿದರು. ಲೇಖಕರನ್ನು, ಸಂಶೋಧಕರನ್ನು ಪ್ರೋತ್ಸಾಹಿಸಿದರು. ಈ ಕಾರ್ಯದಿಂದಲೇ ಅವರನ್ನು ಪುಸ್ತಕ ಸ್ವಾಮೀಜಿ, ಕನ್ನಡ ಜಗದ್ಗುರು ಎಂದು ಜಗದ ಜನ ವ್ಯಾಖ್ಯಾನಿಸಿದ್ದಾರೆ. ಶಿವಾನುಭವ ವೇದಿಕೆ ಮೂಲಕ ಕನ್ನಡವನ್ನು ಕಟ್ಟುವ ಕಾರ್ಯವನ್ನು ಪೂಜೆಯ ರೂಪದಲ್ಲಿ ನೇರವೇರಿಸಿದ್ದಾರೆ. ಅವರು ಕನ್ನಡಕ್ಕಾಗಿ ಬದುಕಿದವರು ಎಂದು ಹೇಳಿದರು.



ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ದೇವಿಹಾಳ ಹಾಗೂ ತಂಗೋಡ ಗ್ರಾಮದ ಹಾಲು ಉತ್ಪಾದಕರ ಸಹಕಾರಿ ಸಂಘದ ಹಾಲು ಉತ್ಪಾದಕರ ಆಕಳು ಮೃತಪಟ್ಟ ಹಿನ್ನೆಲೆಯಲ್ಲಿ ಧಾರವಾಡ ಹಾಲು ಒಕ್ಕೂಟದಿಂದ ಫಲಾನುಭವಿಗಳಿಗೆ ಕೆಎಂಎಫ್ ನಿರ್ದೇಶಕ ಲಿಂಗರಾಜಗೌಡ ಪಾಟೀಲ ಪರಿಹಾರದ ಚೆಕ್ ವಿತರಣೆ ಮಾಡಿದರು. ಜಿಲ್ಲಾ ಮುಖ್ಯಸ್ಥ ಡಾ. ಪ್ರಸನ್ನ ಪಟ್ಟೇದ, ತಾಲೂಕಾ ವಿಸ್ತರಣಾಧಿಕಾರಿ ಬಸವರಾಜ ಜುಮ್ಮಣ್ಣವರ, ಕಿರಣ ಪಾಟೀಲ ಹಾಗೂ ಹಾಲು ಉತ್ಪಾದಕರ ಆಡಳಿತ ಮಂಡಳಿ ಸದಸ್ಯರು, ಗ್ರಾಮಸ್ಥರು ಇದ್ದರು.

# ಆರೋಗ್ಯ ಶಿಬಿರ ಯಶಸ್ವಿ


■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಸಂಸ್ಥೆ ಹಾಗೂ ರಕ್ತ ತಪಾಸಣಾ ಕೇಂದ್ರ, ಬೆಟಗೇರಿ-ಗದಗ ಇವರ ಸಂಯುಕ್ತ ಸಹಯೋಗದಲ್ಲಿ ಸಂಸ್ಥೆಯ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಾಗಿ ಫೆಬ್ರವರಿ 25ರಂದು ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು. ಶಿಬಿರದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗೆ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ವೈದ್ಯಕೀಯ ಸಲಹೆ ನೀಡಲಾಯಿತು.



ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ನಿರ್ದೇಶಕರು/ಪ್ರಾಂಶುಪಾಲರಾದ ಶ್ರೀಮತಿ ಸುಮಲತಾ ಡಿ. ಜಂಟಿ, ಡಾ. ಶಕುಂತಲಾ ಎಸ್. ತೋಟರ್, ಕಿರಣ ಕರಿಗಾರ ಸೇರಿದಂತೆ ಸಂಸ್ಥೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗ್ರಾ.ಪಂ ಉಪಾಧ್ಯಕ್ಷರ ಅವಿರೋಧ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಹೊಸಳ್ಳಿ ಗ್ರಾ.ಪಂ ಉಪಾಧ್ಯಕ್ಷ ಸ್ಥಾನಕ್ಕೆ ಸದಸ್ಯ ಪ್ರವೀಣ ಬಸೇವಡೆಯರ ಅವಿರೋಧವಾಗಿ ಆಯ್ಕೆಯಾದರು. ಈ ಮೊದಲು ಉಪಾಧ್ಯಕ್ಷರಾಗಿದ್ದ ಶಿವಯೋಗಿ ಥಡಿ ತಮ್ಮ ಸ್ಥಾನಕ್ಕೆ ರಾಜಿನಾಮೆ ಸಲ್ಲಿಸಿದ ಹಿನ್ನೆಲೆಯಲ್ಲಿ ಬುಧವಾರ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು.

ಒಟ್ಟು 10 ಸದಸ್ಯರನ್ನು ಹೊಂದಿರುವ ಹೊಸಳ್ಳಿ ಗ್ರಾ.ಪಂನಲ್ಲಿ ಪ್ರವೀಣ ಬಸೇವಡೆಯರ ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದರು. ಇವರ ವಿರುದ್ಧವಾಗಿ ಯಾವುದೇ ನಾಮಪತ್ರ ಸಲ್ಲಿಕೆಯಾಗದ ಹಿನ್ನೆಲೆಯಲ್ಲಿ ತಾ.ಪಂ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಕಂದಕೂರ, ಪ್ರವೀಣ ಬಸೇವಡೆಯರ ಅವಿರೋಧವಾಗಿ ಆಯ್ಕೆಯಾದ್ದಾರೆ ಎಂದು ಘೋಷಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸದಸ್ಯ ಬಿ.ಎಸ್. ರೆಡ್ಡೇರ ಮಾತನಾಡಿ, ಗ್ರಾ.ಪಂ ಉಪಾಧ್ಯಕ್ಷರಾಗಿ ಆಯ್ಕೆಯಾದ ಪ್ರವೀಣ ಬಸೇವಡೆಯರ ಅಭಿವೃದ್ಧಿಪರ ಚಿಂತಕರಾಗಿದ್ದು, ಅವರು ಗ್ರಾಮದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವ ವಿಶ್ವಾಸವಿದೆ. ಅವರಿಗೆ ಎಲ್ಲ ಸದಸ್ಯರುಗ ಸಹಕಾರ ನೀಡಬೇಕು ಎಂದರು.

ಗ್ರಾ.ಪಂ ಅಧ್ಯಕ್ಷೆ ಬಸಮ್ಮ ಸ್ಥಾವರಮಠ, ರೇಖಾ ಮಾದರ, ಶಾರದಾ ಅಂಗಡಿ, ಬಸಪ್ಪ ಮಾರನಬಸರಿ, ಲಲಿತಾ ಕುರಿ, ಶೋಭಾ ಗೊಟಗೊಂಡ, ಅನ್ನಪೂರ್ಣ ಈರಗಾರ ಮುಂತಾದವರು ಉಪಸ್ಥಿತರಿದ್ದರು.

# ಮಕ್ಕಳ ಶಿಕ್ಷಣಕ್ಕೆ ಬಲ ಬಂದಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ನರಗುಂದ ಇವರ ವತಿಯಿಂದ ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳನ್ನಾಗಿ ಆಯ್ಕೆ ಮಾಡಿದ್ದು, ಅದರಡಿಯಲ್ಲಿ ತಾಲೂಕಿನ ಖಾನಾಪೂರ-60ನೇ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ /ಯುಕೆಜಿ ಪ್ರಾರಂಭೋತ್ಸವ ಕಾರ್ಯಕ್ರಮ ಜರುಗಿತು.



ಹಿರಿಯರಾದ ಪ್ರೇಮಾ ತಿಮ್ಮನಗೌಡ್ರ ಕಾರ್ಯಕ್ರಮ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಾಲ ವಿಕಾಸ ಸಮಿತಿ ಅಧ್ಯಕ್ಷರಾದ ಕಾಶೀಬಿ ನದಾಫ್ ವಹಿಸಿದ್ದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ವೆಂಕಪ್ಪ ಗಿರಿತಿಮ್ಮಣ್ಣವರ ಮಾತನಾಡಿ, ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ/ಯುಕೆಜಿ ಪ್ರಾರಂಭಿಸುವುದರಿಂದ ಇಲಾಖೆಯ ವಿವಿಧ ಸೌಲಭ್ಯಗಳ ಬಳಕೆಗೆ ಸಹಾಯಕವಾಗಿದೆ. ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲು, ಮಕ್ಕಳಿಗೆ ರೂಢಿಗತವಲ್ಲದ ಶಿಕ್ಷಣವನ್ನು ಕಲಿಸಲು ಸೂಕ್ತವಾಗಿದೆ ಎಂದರು.

ಹಿರಿಯರಾದ ಶಂಕರಗೌಡ ಕಗದಾಳ ಮಾತನಾಡಿ, ಸರ್ಕಾರದಿಂದ ನಮ್ಮ ಊರಿನ ಅಂಗನವಾಡಿ ಕೇಂದ್ರದಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ಒದಗಿಸುತ್ತಿರುವದು ಖುಷಿಯ ವಿಚಾರ. ಇದರಿಂದ 0-6 ವರ್ಷದ ಮಕ್ಕಳ ಶಿಕ್ಷಣಕ್ಕೆ ಬಲ ಬಂದಂತಾಗಿದೆ. ಮಕ್ಕಳ ಶಿಕ್ಷಣಕ್ಕೆ ಇನ್ನೂ ಹೆಚ್ಚಿನ ಸಹಾಯ-ಸಹಕಾರ ನೀಡಲು ಊರಿನ ಗ್ರಾಮಸ್ಥರು ಸದಾ ಸಿದ್ಧರಿದ್ದೇವೆ ಎಂದರು.

ಪ್ರೇಮಾ ತಿಮ್ಮನಗೌಡ್ರ ಹಾಗೂ ಫಕೀರಗೌಡ ಕಗದಾಳ ಮಕ್ಕಳಿಗೆ ಸಮವಸ್ತ್ರಗಳನ್ನು ಕೊಡುಗೆ ನೀಡಿದರು. ಶಂಕರಗೌಡ ಕಗದಾಳ ಸ್ಕೂಲ್ ಬ್ಯಾಗ್ ಕೊಡುಗೆ ನೀಡಿದರು. ಭಜನಾ ಸಂಘದ ಸದಸ್ಯರು ಹಾಗೂ ರೇಣುಕಾ ತಳವಾರ ಇವರು ನೋಟ್ ಬುಕ್ ಕಾಣಿಕೆ ನೀಡಿದರು. ಮಾದೇವಪ್ಪ ಮೆಣಶಿನಕಾಯಿ, ಸುರೇಂದ್ರಗೌಡ ಪಾಟೀಲ ಮತ್ತು ಹನಮಂತ ಚಿಕ್ಕನವರ ನೀರಿನ ಬಾಟಲ್ ಕೊಡುಗೆ ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಮಾಜಿ ಸದಸ್ಯರಾದ ವೆಂಕನಗೌಡ ಮಲ್ಲನಗೌಡ್ರ, ಹಿರಿಯರಾದ ದಿಲಿಪಸಾಬ ನದಾಫ್, ಶಿಕ್ಷಕರಾದ ಎನ್.ಎಚ್. ಜಾಧವ ಊರಿನ ಗ್ರಾಮಸ್ಥರು, ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರು ಭಾಗವಹಿಸಿದ್ದರು.

## ಮೊರಬ ಗ್ರಾಮದ ಕೃಷಿ ಸಮೃದ್ಧಿ ರೈತ ಉತ್ಪಾದಕರ ಕಂಪನಿಗೆ

# 'ಅತ್ಯುತ್ತಮ ರೈತ ಉತ್ಪಾದಕರ ಕಂಪನಿ ಪ್ರಶಸ್ತಿ'



ಕೃಷಿ ವಿಶ್ವವಿದ್ಯಾಲಯ ಧಾರವಾಡ ಮತ್ತು ಡಾ. ಎಸ್.ವಿ. ಪಾಟೀಲ ಫೌಂಡೇಶನ್ ಇವರ ಸಂಯುಕ್ತ ಆಶ್ರಯದಲ್ಲಿ ಡಾ. ಎಸ್.ವಿ. ಪಾಟೀಲ ಫೌಂಡೇಶನ್‌ನ 4ನೇ ಸಂಸ್ಥಾಪನಾ ದಿನದ ಅಂಗವಾಗಿ ಬುಧವಾರ ಕೃಷಿ ವಿಶ್ವವಿದ್ಯಾಲಯದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ರೈತ ಉತ್ಪಾದಕರ ಕಂಪನಿಗೆ ನೀಡುವ 'ಅತ್ಯುತ್ತಮ ರೈತ ಉತ್ಪಾದಕರ ಕಂಪನಿ ಪ್ರಶಸ್ತಿ'ಯನ್ನು ಮೊರಬದ ಕೃಷಿ ಸಮೃದ್ಧಿ ರೈತ ಉತ್ಪಾದಕರ ಕಂಪನಿ ಲಿಮಿಟೆಡ್ ಇವರಿಗೆ ನೀಡಲಾಯಿತು.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿ ಸಮೃದ್ಧಿ ರೈತ ಉತ್ಪಾದಕರ ಕಂಪನಿ ಲಿಮಿಟೆಡ್ ಮೊರಬ ನಬಾರ್ಡ್ ಪ್ರಾಯೋಜಕತ್ವದೊಂದಿಗೆ ಮತ್ತು ಸ್ಕೋಪ್ ಸಂಸ್ಥೆ ಧಾರವಾಡ ಇವರ ತಾಂತ್ರಿಕ ಸಲಹೆದೊಂದಿಗೆ 2019ರಲ್ಲಿ ಮಂಜೂರಾತಿ ಪಡೆದು 20/07/2020ರಂದು 2013ರ ಕಂಪನಿ ಕಾಯ್ದೆ ಪ್ರಕಾರ ನೋಂದಣಿಯಾಗಿದೆ.

ಮೊರಬ ಕೇಂದ್ರವನ್ನಾಗಿರಿಸಿಕೊಂಡು ಮೊರಬ ಮತ್ತು ಸುತ್ತಮುತ್ತಲಿನ ಗ್ರಾಮಗಳ ಸುಮಾರು 800 ರೈತರು ಸೇರ್ಪಡೆಯಾಗಿದ್ದು, ಸುಮಾರು 40 ರೈತ ಆಸಕ್ತ ಗುಂಪುಗಳಿವೆ. ಇದರಲ್ಲಿ 5 ಜನ ನಿರ್ದೇಶಕರು ಮತ್ತು 5 ಜನ ಪ್ರವರ್ತಕರೊಂದಿಗೆ ಆಡಳಿತ ಮಂಡಳಿಯಾಗಿ ಕಾರ್ಯ ನಿರ್ವಹಿಸುತ್ತಿದೆ.

ಸರಾಸರಿ ಪ್ರತಿ ವರ್ಷ ಸುಮಾರು 1 ಕೋಟಿಯಷ್ಟು ವ್ಯವಹಾರ ಮಾಡುತ್ತಾ ಬಂದಿರುವ ಈ ರೈತ ಉತ್ಪಾದಕ ಕಂಪನಿಯು, ರೈತರಿಗೆ ಬೇಕಾದ ಕೃಷಿ ಪರಿಕರಗಳಾದ ರಸಗೊಬ್ಬರ, ಬೀಜ, ಕೀಟನಾಶಕ, ತಾಡಪತ್ರಿ ಮತ್ತು ಇತರ ಪರಿಕರಗಳನ್ನು ಯೋಗ್ಯ ದರದಲ್ಲಿ ಮಾರಾಟ, ಅನೇಕ ಸದಸ್ಯ ರೈತರಿಗೆ ಸರಕಾರದ ವಿವಿಧ ಯೋಜನೆಗಳ ಮಾಹಿತಿ ಕಾರ್ಯಾಗಾರ, ಸರಕಾರದ ಬೆಂಬಲ ಬೆಲೆ ಯೋಜನೆ ಅಡಿ ಖರೀದಿ ಕೇಂದ್ರಗಳನ್ನು ತೆರೆಯುವ ಕಾರ್ಯ ಮಾಡಿದೆ.

ಪ್ರಸ್ತುತ ಭಾರತ ಸರಕಾರ ಮತ್ತು ರಾಜ್ಯ ಸರಕಾರದ ವಿವಿಧ ಯೋಜನೆಗಳನ್ನು ಸೇರ್ಪಡೆಗೊಳಿಸಿ ಯುಸಿಓ ಬ್ಯಾಂಕ್ ಅಮೀನಭಾವಿ ಶಾಖೆಯ ಸಹಕಾರ ಮತ್ತು ಸೆಲ್ಕೊ ಫೌಂಡೇಶನ್ ಇವರ ಆರ್ಥಿಕ ನೆರವಿನೊಂದಿಗೆ ಮೊರಬ ಗ್ರಾಮದಲ್ಲಿ ಸೋಲಾರ್ ಡ್ರೈಯರ್, ಚಿಲ್ಲಿ ಪೌಂಡಿಂಗ್, ದಾಲ್ ಪ್ರೊಸೆಸಿಂಗ್ (DRYER, Chilly Pounding, Dall PROCESSING) ಮತ್ತು ಎಣ್ಣೆ ಗಾಣ ಘಟಕ ಸ್ಥಾಪಿಸಲಿದ್ದು, ಶೀಘ್ರವೇ ಕಾರ್ಯಾರಂಭ ಮಾಡಲಿದೆ.

# ವಿಬಿಜೀ ರಾಮ್ ಜೀ ಯೋಜನೆಯ ಜನಜಾಗೃತಿ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರ ಗದಗ ಗ್ರಾಮೀಣ ಮಂಡಲದ ಹರ್ತಿ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಮಹತ್ವದ ಯೋಜನೆ ವಿಬಿಜೀ ರಾಮ್ ಜೀ ಯೋಜನೆಯ ಜನಜಾಗೃತಿ ಸಭೆ ಹಮ್ಮಿಕೊಳ್ಳಲಾಗಿತ್ತು.

ಸಭೆಯ ಅಧ್ಯಕ್ಷತೆಯನ್ನು ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾಗಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಆಗಮಿಸಿದ್ದರು. ಈ ಸಂದರ್ಭದಲ್ಲಿ ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಮಂಜುನಾಥ ಹಳ್ಳೂರಮಠ, ಸುಭಾಸ ಸುಂಕದ, ಮುಖಂಡರಾದ ಡಿ.ಬಿ. ಕರೀಗೌಡ್ರ, ಎಸ್.ಎಮ್. ಬಳ್ಳೊಳ್ಳಿ, ಎಸ್.ಎಸ್. ಬಳ್ಳೊಳ್ಳಿ, ಬಸವರಾಜ ಚುರ್ಚಿಹಾಳ, ಬಸವಂತಪ್ಪ ಆರಟ್ಟಿ, ವಿ.ಸಿ. ಹುಲ್ಲೂರ, ವೀರಪ್ಪ ಹಡಪದ, ಬಿ.ಡಿ. ಖಾನಾಪೂರ, ಅಂದಾನಗೌಡ ಅಂದಾನಿಗೌಡ್ರ, ಡಿ.ಆಯ್. ಅಣ್ಣಿಗೇರಿ, ಚಂದ್ರಗೌಡ ಮಲ್ಲನಗೌಡ್ರ, ಮಲ್ಲಪ್ಪ ಖಾನಾಪೂರ, ಪ್ರಭು ಶಲವಡಿ, ಮೋಹನ ಕೋರಿ, ರಾಜು ಕುಲಕರ್ಣಿ, ಹನುಮಂತ ನಿಂಬನಾಯ್ಕರ, ವೆಂಕಟೇಶ ಸೂರಣಗಿ, ರಾಜು ಗುಡಸಲಮನಿ, ಮಂಜುನಾಥಗೌಡ ಮರೀಯಪ್ಪಗೌಡ್ರ, ಪಾಂಡುರೆಡ್ಡಿ ಹುಲಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka